ಸಂಪುಟ : 9 ಸಂಚಿಕೆ 236 ಪುಟ : 4 ಬೆಲೆ: 3.00 ರವಿವಾರ ಅಕ್ಟೋಬರ್ 27 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 236 Pages : 4 Price : 3.00 Sunday October 27 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪುರಾಣ ಮಂಗಲ ಇಂದು

■ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ಮಾರನಬಸರಿ ಗ್ರಾಮದ ವಾಲ್ಮೀಕಿ ಮಹರ್ಷಿಗಳ ಪುರಾಣ ಮಂಗಲ ಕಾರ್ಯಕ್ರಮ ಅ. 27ರಂದು ಜರುಗಲಿದೆ. ಧಾರ್ಮಿಕ ಕಾರ್ಯಕ್ರಮದ ನಿಮಿತ್ತ ಬೆಳಿಗ್ಗೆ 10ಕ್ಕೆ ಕುಂಭ ಮೇಳದೊಂದಿಗೆ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರದ ಮೆರವಣಿಗೆ ನಡೆಯಲಿದ್ದು, ಮದ್ಯಾಹ್ನ 1ಕ್ಕೆ ಅನ್ನ ಸಂತರ್ಪಣೆ ಜೊತೆಗೆ ಪುರಾಣ ಮಹಾಮಂಗಲ ನಡೆಯಲಿದೆ.

ಕಾರ್ಯಕ್ರಮದಲ್ಲಿ ಸಮಾಜದ ಮಾಠಾಧೀಶರು, ರಾಜಕೀಯ ಮುಖಂಡರು, ಗ್ರಾ.ಪಂ ಸರ್ವ ಸದಸ್ಯರು ಭಾಗಿಯಾಗಲಿದ್ದಾರೆಂದು ಸಮಾಜದ ಮುಖಂಡರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ರೇ. ಉತ್ತಂಗಿ ಚೆನ್ನಪ್ಪನವರ ಜಯಂತಿ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಅ. 27ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವ ದಳದ 1617ನೇ ಶರಣ ಸಂಗಮದಲ್ಲಿ ಸರ್ವಜ್ಞ ಸಾಹಿತಿ ರೇ. ಉತ್ತಂಗಿ ಚೆನ್ನಪ್ಪನವರ 143ನೇ ಜಯಂತಿ ಕುರಿತು ಉಪನ್ಯಾಸ ಹಾಗೂ ವಚನ ಚಿಂತನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಎನ್. ಎಚ್. ಹಿರೇಸಕ್ಕರಗೌಡ್ರ ಉಪನ್ಯಾಸ ಮಾಡುವರು. ಶರಣೆ ಮಂಗಳಕ್ಕ ಬಿ.ಕಾಮಣ್ಣವರ ಇವರು ವಚನ ಚಿಂತನೆ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆಯ ಚುನಾವಣಾ ವೇಳಾಪಟ್ಟಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಶಾಖೆಯ ಕಾರ್ಯಕಾರಿ ಸಮಿತಿ ನಿರ್ದೇಶಕರ ಚುನಾವಣಾಯು ನವೆಂಬರ್ 16ರಂದು ಜರುಗಲಿದೆ.

ನಾಮಪತ್ರ ಸಲ್ಲಿಸಲು ಆರಂಭ– ಅಕ್ಟೋಬರ್ 28ರ ಬೆಳಿಗ್ಗೆ 11 ಗಂಟೆಯಿಂದ ಸಂಜೆ 5 ಗಂಟೆಯವರೆಗೆ. ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ನವೆಂಬರ್ 7ರ ಸಂಜೆ 5 ಗಂಟೆಯವರೆಗೆ ಅವಕಾಶವಿದ್ದು, ನ.8ರ ಬೆಳಿಗ್ಗೆ 11 ಗಂಟೆಯಿಂದ ನಾಮಪತ್ರಗಳನ್ನು ಪರಿಶೀಲಿಸಲಾಗುವದು. ಅರ್ಹ ಅಭ್ಯರ್ಥಿಗಳ ಹೆಸರನ್ನು ಪರಿಶೀಲನೆಯ ನಚಿತರ ಅಂದೇ ಘೋಷಿಸಲಾಗುವುದು. ಉಮೇದುವಾರಿಕೆಯನ್ನು ವಾಪಸ್ಸು ಪಡೆದ ನಂತರ ಚುನಾವಣಾ ಕಣದಲ್ಲಿ ಉಳಿದ ಅಭ್ಯರ್ಥಿಗಳ ಹೆಸರುಗಳನ್ನು ನ.11ರ ಸಂಜೆ 5.30 ಗಂಟೆಯ ನಂತರ ಪ್ರಕಟಿಸಲಾಗುವುದು.

ನ. 16ರ ಬೆಳಿಗ್ಗೆ 9ರಿಂದ ಅಪರಾಹ್ನ 4 ಗಂಟೆಯವರೆಗೆ ಮುಳಗುಂದ ರಸ್ತೆಯ ಸರಕಾರಿ ನೌಕರರ ಸಮುದಾಯ ಭವನದಲ್ಲಿ ಮತದಾನ ನಡೆಯಲಿದೆ. ಮತಗಳ ಎಣಿಕೆ ಅದೇ ದಿನ ಮತದಾನ ಮುಕ್ತಾಯವಾದ ನಂತರ ನಡೆಯಲಿದ್ದು, ಅಂದೇ ಫಲಿತಾಂಶ ಘೋಷಣೆಯಾಗಲಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಶಾಖೆಯ ಚುನಾವಣಾಧಿಕಾರಿ ಎಸ್.ಬಿ. ಚವಡಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

### ಕೋಟುಮಚಗಿ ಗ್ರಾಮದ ನ್ಯಾಯಬೆಲೆ ಅಂಗಡಿಯಲ್ಲಿ ತಿನ್ನಲು ಯೋಗ್ಯವಲ್ಲದ ಕಳಪೆ ಜೋಳ ವಿತರಣೆ

# ಇದನ್ನ ತಿಂದ್ರೆ ಆಸ್ಪತ್ರೆ ಸೇರಬೇಕ್ರೀ...

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕ ಭಾಗದಲ್ಲಿ ‘ರೊಟ್ಟಿ ತಿಂದ್ರೆ ಗಟ್ಟಿ ಆಗ್ತಾರೆ’ ಎಂಬ ಮಾತಿದೆ. ಆದರೆ, ಇದಕ್ಕೆ ವ್ಯತಿರಿಕ್ತವಾಗಿ ಸರ್ಕಾರ ಕೊಡುವ ಜೋಳದಿಂದ ರೊಟ್ಟಿ ಮಾಡಿ ತಿಂದರೆ ಆಸ್ಪತ್ರೆ ಸೇರುವುದು ಪಕ್ಕಾ ಎಂಬಂತಾಗಿದೆ. ಸರ್ಕಾರ ಜಾನುವಾರುಗಳೂ ತಿನ್ನಲು ಸಾಧ್ಯವಾಗದಷ್ಟು ಕಳಪೆ ಗುಣಮಟ್ಟದ ಜೋಳವನ್ನು ಬಡವರಿಗೆ ಒದಗಿಸುತ್ತಿದ್ದು, ಬಡವರಿಗಾಗಿ ಕಾಂಗ್ರೆಸ್ ಸರ್ಕಾರ ನೀಡಿದ ಗ್ಯಾರಂಟಿ ಇದಾಗಿದೆ ಎಂದು ಮಹಿಳೆಯರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ಮಹಿಳೆಯರ ಈ ಆಕ್ರೋಶಕ್ಕೆ ಕಾರಣವೂ ಇಲ್ಲದಿಲ್ಲ. ಪಡಿತರ ವಿತರಣಾ ಕೇಂದ್ರಗಳಲ್ಲಿ ಧೂಳು, ಕಸ, ಜಿಡ್ಡು ಹಿಡಿದ ಜೋಳವನ್ನು ವಿತರಣೆ ಮಾಡುತ್ತಿದ್ದು, ಇದನ್ನು ತಿಂದರೆ ಗಟ್ಟಿಯಾಗುವ ಬದಲು ರೋಗಿಗಳಾಗಿ ಆಸ್ಪತ್ರೆ ಸೇರಬೇಕಾಗುತ್ತದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಗದಗ ತಾಲೂಕಿನ ಕೋಟುಮಚಗಿ ಗ್ರಾಮದ ನ್ಯಾಯಬೆಲೆ ಅಂಗಡಿಯಲ್ಲಿ ತಿನ್ನಲು ಯೋಗ್ಯವಲ್ಲದ ಕಳಪೆ ಜೋಳ ವಿತರಣೆ ಮಾಡಲಾಗುತ್ತಿದೆ. ‘ಜೋಳ ಛಲೋ ಇಲ್ರಿ. ಜೋಳ ಕೆಟ್ಟು ಕೆಸರು ಹಿಡಿದಿದೆ. ಇದು ಸರ್ಕಾರದ ಬೆಸ್ಟ್ ಕೆಲಸ ನೋಡ್ರಿ’ ಎಂದು ಪಡಿತರ ಪಡೆದ ವೃದ್ಧೆಯೋರ್ವರು ವ್ಯಂಗ್ಯವಾಡಿದ್ದಾರೆ.





ಈ ಬಗ್ಗೆ ಸಾರ್ವಜನಿಕರಿಂದ ಆಹಾರ ಇಲಾಖೆಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಈ ಬಗ್ಗೆ ನ್ಯಾಯಬೆಲೆ ಅಂಗಡಿಯವರನ್ನು ವಿಚಾರಿಸಿದರೆ, ಸರ್ಕಾರ ಎಂತಹ ಪದಾರ್ಥಗಳನ್ನು ನಮಗೆ ಒದಗಿಸಿದೆಯೋ ಅದನ್ನೇ ನಾವು ಫಲಾನುಭವಿಗಳಿಗೆ ವಿತರಿಸುತ್ತೇವೆ ಎಂಬರ್ಥದ ಮಾತುಗಳನ್ನಾಡಿದ್ದಾರೆ.

ಪಡಿತರ ಧಾನ್ಯವಿಲ್ಲದೇ ಬದುಕಲು ಸಾಧ್ಯವಿಲ್ಲ. ಬಡವರು ಹೇಗಿದ್ದರೂ ಖರೀದಿ ಮಾಡಲೇಬೇಕು. ಆದರೆ, ಸರ್ಕಾರ ಉಚಿತವಾಗಿ ನೀಡುವ ಪಡಿತರದಲ್ಲಿ ಕಳಪೆ ಧಾನ್ಯಗಳನ್ನು ಪೂರೈಸುವುದು ಸರಿಯೇ ಎಂದು ಫಲಾನುಭವಿಗಳು ಅಸಮಾಧಾನ ಹೊರಹಾಕಿದ್ದಾರೆ.

> ಸರ್ಕಾರ ಸರ್ಕಾರ ಕಳಪೆ ಜೋಳ ವಿತರಣೆ ಮಾಡಿದೆ. ಒಂದು ವೇಳೆ ಈ ಜೋಳದಿಂದ ಮಾಡಿದ ರೊಟ್ಟಿ ತಿಂ–ದು ಬಡವರ ಆರೋಗ್ಯ ಹದಗೆಟ್ಟು ಆಸ್ಪತ್ರೆ ಸೇರುವಂತಾದರೆ ಸರ್ಕಾರವೇ ಹೊಣೆಯಾಗುತ್ತದೆ. ಇಂತಹ ಹೊಟ್ಟು, ಕಸ ಮಿಶ್ರಿತ ಜೋಳದ ವಿತರಣೆಯನ್ನು ಕೂಡಲೇ ನಿಲ್ಲಿಸಬೇಕು. ಕೂಡಲೇ ಆಹಾರ ಇಲಾಖೆಯ ಅಧಿಕಾರಿಗಳು ಎಚ್ಚೆತ್ತು ಜಿಲ್ಲೆಯಲ್ಲಿ ಎಷ್ಟು ಪ್ರಮಾಣದಲ್ಲಿ ಕಳಪೆ ಜೋಳ ವಿತರಣೆ ಆಗಿದೆಯೋ ಅದೆಲ್ಲವನ್ನೂ ವಾಪಸ್ ಪಡೆದು ಗುಣಮಟ್ಟದ ಜೋಳ ವಿತರಣೆ ಮಾಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

### ಜಿಲ್ಲಾ ಮಟ್ಟದ ‘ಮಕ್ಕಳ ಹಕ್ಕುಗಳ ಸಂಸತ್ತು–2024’ರ ಕಾರ್ಯಕ್ರಮ

# ಮಕ್ಕಳ ಹಕ್ಕುಗಳನ್ನು ಅರಿಯಿರಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಕ್ಕಳು ತಮ್ಮ ಜೀವನದಲ್ಲಿ ಎದುರಿಸುತ್ತಿರುವ ಮೂಲ ಸಮಸ್ಯೆಗಳನ್ನು ಗೌಪ್ಯವಾಗಿಡದೇ ತಂದೆ–ತಾಯಿ ಹಾಗೂ ಸಂಬಂಧಿಸಿದವರ ಹತ್ತಿರ ಮುಕ್ತವಾಗಿ ಮಾತನಾಡಬೇಕು. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗಾಗಿ ರಾಜ್ಯ ಹಾಗೂ ಕೇಂದ್ರ ಸರ್ಕಾರ ಸಾಕಷ್ಟು ಶ್ರಮಿಸುತ್ತಿದೆ. ಪ್ರತಿಯೊಬ್ಬರೂ ಮಕ್ಕಳ ಹಕ್ಕುಗಳನ್ನು ಅರಿಯಬೇಕು ಎಂದು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕಾ ವಿಸ್ತರಣಾಧಿಕಾರಿ ಮರಿಗೌಡ ಸುರಕೋಡ ಹೇಳಿದರು.

ಅವರು ಶಿರಹಟ್ಟಿ ಪಟ್ಟಣದ ಡಿ. ದೇವರಾಜು ಅರಸು ಭವನದಲ್ಲಿ ಯುನಿಸೆಫ್, ಕರ್ನಾಟಕ ಮಕ್ಕಳ ಹಕ್ಕುಗಳ ನಿಗಾ ಕೇಂದ್ರ ಬೆಂಗಳೂರು, ಚೈಲ್ಡ್ ರೈಟ್ಸ್ ಟ್ರಸ್ಟ್ ಹಾಗೂ ಆಸರೆ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಸ್ಥೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ ಜಿಲ್ಲಾ ಮಟ್ಟದ ‘ಮಕ್ಕಳ ಹಕ್ಕುಗಳ ಸಂಸತ್ತು–2024’ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.



ಬಾಲ್ಯ ವಿವಾಹ, ಲಿಂಗ ತಾರತಮ್ಯ, ದುರುಪಯೋಗ, ಬಾಲಕಾರ್ಮಿಕತೆ, ಲೈಂಗಿಕ ಕಿರುಕುಳ ಹಾಗೂ ಮಕ್ಕಳ ಸಾಗಾಣಿಕೆ ಬಗ್ಗೆ ವಿಷಯಗಳನ್ನು ಮುಚ್ಚಿಡುವಂತಹ ಕಾರ್ಯ ಮಾಡದೇ ನಿರ್ಭೀತಿಯಿಂದ ನಿಮ್ಮ ಮಕ್ಕಳ ಹಕ್ಕುಗಳನ್ನು ಅರಿತು ನಿಮ್ಮ ಹಕ್ಕುಗಳನ್ನು ಚಲಾಯಿಸಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಅಕ್ಬರ್ ಯಾದಗಿರಿ, ಪ್ರಕಾಶ ಮೇಟಿ, ಮಂಜುನಾಥ ಅರೆಪಲ್ಲಿ, ಪ್ರದೀಪ ಗೊಡಚಪ್ಪನವರ, ವೀರೇಶ ಉಮನಾಬಾದಿ, ಗೌರೀಶ ನಾಗಶೆಟ್ಟಿ, ಬಸವರಾಜ ನವಲಗುಂದ, ಜಿಲ್ಲೆಯ ಎಲ್ಲ ತಾಲೂಕುಗಳಿಂದ ಐವತ್ತಕ್ಕೂ ಹೆಚ್ಚು ಮಕ್ಕಳು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

> ಜಿಲ್ಲಾ ಮಟ್ಟದ ಮಕ್ಕಳ ಹಕ್ಕುಗಳ ಸಮಾಲೋಚನಾ ಸಭೆಯಲ್ಲಿ ಆಸರೆ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಸ್ಥೆಯ ಕಾರ್ಯದರ್ಶಿ ಶಶಿಧರ ಶಿರಸಂಗಿ ಮಾತನಾಡಿ, ಇಂದಿನ ಮಕ್ಕಳ ಸಂಸತ್ತು ಚರ್ಚೆಯಲ್ಲಿ ನೀವೆಲ್ಲರೂ ಸಕ್ರಿಯವಾಗಿ ಭಾಗವಹಿಸಿ ನಿಮ್ಮ ಸಮಸ್ಯೆಗಳ ಪಟ್ಟಿ ತಯಾರಿಸಿ. ಇಲ್ಲಿಂದ ಆಯ್ಕೆಗೊಂಡ 2 ಮಕ್ಕಳು ಬೆಂಗಳೂರಿನಲ್ಲಿ ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಜರುಗುವ ಸಮಲೋಚನಾ ಸಭೆಯಲ್ಲಿ ನಮ್ಮ ಜಿಲ್ಲೆಯನ್ನು ಪ್ರತಿನಿಧಿಸಲು ತಾವು ಅನುಭವಿಸುತ್ತಿರುವ ಸಮಸ್ಯೆಗಳನ್ನು ಚರ್ಚಿಸಲು ಉತ್ತಮ ಭಾಗವಹಿಸುವಿಕೆ ಮೂಲಕ ಯಶಸ್ಸು ಕಾಣಬೇಕಿದೆ. ಹೀಗಾಗಿ, ರಾಜ್ಯದಲ್ಲಿರುವ ಎಲ್ಲ ಮಕ್ಕಳನ್ನು ದೃಷ್ಟಿಯಲ್ಲಿಟ್ಟುಕೊಂಡು ಚರ್ಚಿಸಿ ಎಂದು ಹೇಳಿದರು.

### ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ಅನಿಲ ಬಡಿಗೇರ

# ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ನವೆಂಬರ್ 1ರಂದು ನಡೆಯಲಿರುವ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಅತ್ಯಂತ ವ್ಯವಸ್ಥಿತವಾಗಿ ಮತ್ತು ಅರ್ಥಪೂರ್ಣವಾಗಿ ಆಚರಣೆ ಮಾಡುವ ನಿಟ್ಟಿನಲ್ಲಿ ಎಲ್ಲ ಇಲಾಖೆಯ ಅಧಿಕಾರಿಗಳು, ಚುನಾಯಿತ ಜನಪ್ರತಿನಿಧಿಗಳು ಮತ್ತು ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಸೇರಿದಂತೆ ಎಲ್ಲರ ಸಹಕಾರ ಅಗತ್ಯ ಎಂದು ತಹಸೀಲ್ದಾರ ಅನಿಲ ಬಡಿಗೇರ ಹೇಳಿದರು.

ಅವರು ತಹಸೀಲ್ದಾರ ಕಚೇರಿಯಲ್ಲಿ ಜರುಗಿದ ಕರ್ನಾಟಕ ರಾಜ್ಯೋತ್ಸವ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ನ.1 ನಮ್ಮೆಲ್ಲರಿಗೂ ಹೆಮ್ಮೆಯ ದಿನ. ಅಂದು ಬೆಳಿಗ್ಗೆ 10 ಗಂಟೆಗೆ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ತಾಲೂಕು ಕಚೇರಿ ಆವರಣದಲ್ಲಿ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಗುವುದು. ಮೆರವಣಿಗೆ ತಾಲೂಕು ಕಚೇರಿಯಿಂದ ನೆಹರು ವೃತ್ತದ ಮಾರ್ಗವಾಗಿ ಎಸ್.ಎಮ್. ಡಬಾಲಿ ತಾಲೂಕಾ ಕ್ರೀಡಾಂಗಣಕ್ಕೆ ತಲುಪಲಿದ್ದು, ತಾಲೂಕು ಕ್ರೀಡಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನೆರವೇರಿಸಲಾಗುವುದು. ಎಲ್ಲ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ, ವಿಜೃಂಭಣೆಯಿಂದ ಜರುಗಲು ಸರ್ವರೂ ಸಹಕಾರ ನೀಡುವಂತೆ ಕೋರಿದರು.

ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದ ಯಶಸ್ಸಿಗೆ ಸಂಪೂರ್ಣ ಸಹಕಾರ ನೀಡಲಾಗುವುದು. ಬೆಳಿಗ್ಗೆ ತಾಲೂಕಾ ಕಚೇರಿಯಲ್ಲಿ ಸೇರುವುದರೊಂದಿಗೆ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಎಡಿಎ ರೇವಣಪ್ಪ ಮನಗೂಳಿ, ಪ.ಪಂ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ನಾಗರಾಜ ಲಕ್ಕುಂಡಿ, ಕಸಾಪ ಕಾರ್ಯದರ್ಶಿ ಸತೀಶ ದೇಶಪಾಂಡೆ, ವಿವಿಧ ಕನ್ನಡಪರ ಸಂಘಟನೆಗಳ ಪ ದಾ ಧಿ ಕಾ ರಿ ಗ ಳಾ ದ ವೀರೇಶಪ್ರಸಾರದ, ರಾಜು ಶಿರಹಟ್ಟಿ, ಸಂಜೀವ ಪೋತರಾಜ, ಹಸನ ತಹಸೀಲ್ದಾರ, ಅಕ್ಬರ ಯಾದಗಿರಿ, ಕೆ.ಎ. ಬಳಿಗಾರ, ಎಚ್.ಎಮ್. ದೇವಗಿರಿ, ಸಿಡಿಪಿಒ ಮೃತ್ಯುಂಜಯ ಗುಡ್ಡದಾನ್ವೇರಿ, ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಮರಿಗೌಡ ಸುರಕೊಂಡ ಮುಂತಾದವರು ಉಪಸ್ಥಿತರಿದ್ದರು.

## ಹಜರತ್ ಮೆಹಬೂಬ ಸುಬ್ಹಾನಿ ಉರುಸು ಇಂದು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದಲ್ಲಿ ಅ.27ರಂದು ಹಜರತ್ ಮೆಹಬೂಬ ಸುಬ್ಹಾನಿ ಉರುಸು ನಡೆಯಲಿದೆ.

ಕಾರ್ಯಕ್ರಮದ ಅಂಗವಾಗಿ ಮುಂಜಾನೆ 11.30ಕ್ಕೆ ಕರ್ನಾಟಕ ಏಕೀಕರಣದ ರೂವಾರಿ ದಿ. ಅಂದಾನಪ್ಪ ದೊಡ್ಡಮೇಟಿಯವರ ಮನೆಯಿಂದ ಗಂಧವನ್ನು ಡೊಳ್ಳು ವಾದ್ಯ ವೈಭವದೊಂದಿಗೆ ಮೆರವಣಿಗೆ ಮೂಲಕ ಬಂಡಿವಡ್ಡರ ಓಣಿಯಲ್ಲಿರುವ ದರ್ಗಾಕ್ಕೆ ತರಲಾಗುತ್ತದೆ.

ನಂತರ ಪೂಜೆ ನೆರವೇರಲಿದೆ. ಮಧ್ಯಾಹ್ನ 1 ಗಂಟೆಗೆ ಅನ್ನ ಪ್ರಸಾದ ವಿತರಣೆ ನಡೆಯಲಿದೆ ಎಂದು ಹಜರತ್ ಮೆಹಬೂಬ ಸುಬ್ಹಾನಿ ದರ್ಗಾ ಕಮಿಟಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಕ್ಷಿ ಸುಭಾಷಿತ

ನಮ್ಮಲ್ಲಿರುವ ದುರ್ಬಲತೆಯನ್ನು ಕಂಡುಕೊಂಡು ಅದರಿಂದ ಹೊರಬರಲು ಯತ್ನಿಸುವುದೇ ನಾವು ಶಕ್ತಿವಂತರಾಗುವ ಮೊದಲ ಹಂತ. ದೌರ್ಬಲ್ಯವನ್ನು ದೂರಮಾಡಿಕೊಳ್ಳೋಣ!

–ಸುಭಾಷಿತ

## ಸಂಪಾದಕೀಯ

# ಶಿಗ್ಗಾಂವಿ, ಸಂಡೂರು ಕ್ಷೇತ್ರ ಮರೆತ ರಾಷ್ಟ್ರೀಯ ಪಕ್ಷಗಳು

ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆಗೆ ದಿನಗಣನೆ ಆರಂಭವಾಗಿದೆ. ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡಿದೆ. ಇದೆಲ್ಲದರ ಮಧ್ಯೆ ಚನ್ನಪಟ್ಟಣ ಕ್ಷೇತ್ರ ಮಾತ್ರ ಹೈವೋಲ್ಟ್ ಕ್ಷೇತ್ರವಾಗಿ ಪರಿಣಮಿಸಿದೆ.

ಸಿಪಿ ಯೋಗೇಶ್ವರ್ ಮತ್ತು ನಿಖಿಲ್ ಕುಮಾರಸ್ವಾಮಿ ಮಧ್ಯೆ ನೇರ ಹಣಾಹಣಿಗೆ ಚನ್ನಪಟ್ಟಣ ಸಾಕ್ಷಿಯಾಗುತ್ತಿದೆ. ಕಾಂಗ್ರೆಸ್ ಮತ್ತು ಬಿಜೆಪಿ–ಜೆಡಿಎಸ್ ಮೈತ್ರಿಕೂಟ ಚನ್ನಪಟ್ಟಣ ಕ್ಷೇತ್ರವನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡಿರುವುದರಿಂದ, ಇಡೀ ರಾಜ್ಯದ ಗಮನ ಸೆಳೆಯುತ್ತಿದೆ. ಕಾಂಗ್ರೆಸ್ ಪರವಾಗಿ ಇಡೀ ಸರ್ಕಾರವೇ ಚನ್ನಪಟ್ಟಣದತ್ತ ಚಿತ್ತ ಹರಿಸಿದೆ. ಬಿಜೆಪಿಯ ಘಟಾನುಘಟಿ ನಾಯಕರು ಜೆಡಿಎಸ್ ನ ವರಿಷ್ಠರು ಚನ್ನಪಟ್ಟಣದಲ್ಲಿ ಬೀಡು ಬಿಟ್ಟಿದ್ದಾರೆ.

ಹೀಗೆ ಚನ್ನಪಟ್ಟಣ ಕ್ಷೇತ್ರ ಭಾರಿ ಚರ್ಚೆಯಲ್ಲಿರುವ ಕಾರಣಕ್ಕಾಗಿ ಇನ್ನುಳಿದ ಎರಡು ಕ್ಷೇತ್ರಗಳಾದ ಶಿಗ್ಗಾಂವಿ ಮತ್ತು ಸಂಡೂರು ಕಡೆಯಾರೊಬ್ಬರ ಗಮನವೂ ಸೆಳೆಯುತ್ತಿಲ್ಲ. ಶಿಗ್ಗಾಂವಿಯಲ್ಲಿ ಕಾಂಗ್ರೆಸ್ ಗೆ ಬಂಡಾಯದ ಬಿಸಿ ತಾಗಿದೆ. ನಾಮಪತ್ರ ಸಲ್ಲಿಕೆ ನಂತರವೂ ಬಂಡಾಯದ ಬಿಸಿ ಶಮನವಾಗದಿರುವುದು ಕಾಂಗ್ರೆಸ್ ನಾಯಕರು ಇಕ್ಕಟ್ಟಿಗೆ ಸಿಲುಕಿದ್ದಾರೆ.

ಬಂಡಾಯದ ಬಿಸಿ ಆರಿದರೂ, ಶಮನವಾದರೂ ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲುವುದು ಕಷ್ಟ ಸಾಧ್ಯ. ಕಳೆದ ವಿಧಾನಸಭೆ ಚುನಾವಣೆಯಲ್ಲಿ 35 ಸಾವಿರ ಮತಗಳ ಅಂತರದಿಂದ ಸೋಲು ಕಂಡ ಅಭ್ಯರ್ಥಿಗೆ ಮತ್ತೊಮ್ಮೆ ಕಾಂಗ್ರೆಸ್ ಮಣೆ ಹಾಕಿರುವುದು, ಸುಲಭವಾಗಿ ಗೆಲ್ಲಬಹುದಾಗಿದ್ದ ಕ್ಷೇತ್ರವನ್ನು ಕೈ ಚೆಲ್ಲುವಂತಾಗಿದೆ.

ಮತ್ತೊಂದೆಡೆ ಸಂಡೂರು ಕ್ಷೇತ್ರದಲ್ಲಿಯೂ ಕಾಂಗ್ರೆಸ್ ವಿರುದ್ಧ ಕಾರ್ಯಕರ್ತರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ತುಕಾರಾಂ ಪತ್ನಿಗೆ ಕಾಂಗ್ರೆಸ್ ಟಿಕೆಟ್ ನೀಡಿರುವುದು ಕಾರ್ಯಕರ್ತರ ಅಸಮಾಧಾನಕ್ಕೆ ಕಾರಣವಾಗಿದೆ. ಹೀಗಾಗಿ ಅಲ್ಲಿಯೂ ಕಾಂಗ್ರೆಸ್ ಮತ್ತು ಬಿಜೆಪಿ ಅಭ್ಯರ್ಥಿ ಮಧ್ಯೆ ನೇರ ಹಣಾಹಣಿ ಎದುರಾಗಿದೆ.

ಚನ್ನಪಟ್ಟಣದಲ್ಲೂ ಕಾಂಗ್ರೆಸ್ ಅಭ್ಯರ್ಥಿಗೆ ಪ್ರಬಲ ಸ್ಪರ್ಧೆ ಎದುರಾಗಿದೆ. ಇನ್ನುಳಿದ ಎರಡೂ ಕ್ಷೇತ್ರದಲ್ಲೂ ಕಾಂಗ್ರೆಸ್ ಗೆ ಭಾರೀ ಪೈಪೋಟಿ ಕಂಡುಬರುತ್ತಿದೆ. ಆದರೂ ಎರಡೂ ಪಕ್ಷದ ವರಿಷ್ಠರ ಗಮನ ಮಾತ್ರ ಚನ್ನಪಟ್ಟಣ ಕ್ಷೇತ್ರದತ್ತಲೇ ನೆಟ್ಟಿದೆ.


### ಜಿಲ್ಲಾ ಕುಷ್ಟರೋಗ ನಿರ್ಮೂಲಲಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಮಾಹಿತಿ

# ಕುಷ್ಟರೋಗ ಪ್ರಕರಣ ಪತ್ತೆ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ರಾಷ್ಟ್ರೀಯ ಕುಷ್ಟರೋಗ ನಿರ್ಮೂಲನ ಕಾರ್ಯಕ್ರಮದಡಿಯಲ್ಲಿ ಕುಷ್ಟರೋಗ ಪ್ರಕರಣಗಳ ಪತ್ತೆ ಹಚ್ಚುವ ಅಭಿಯಾನ 2024–25ರ ಸಮೀಕ್ಷೆಯ ಕಾರ್ಯಕ್ರಮವನ್ನು ನವೆಂಬರ್ 4ರಿಂದ 21ರವರೆಗೆ ಹಮ್ಮಿಕೊಳ್ಳಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಒಬ್ಬ ಆಶಾ ಕಾರ್ಯಕರ್ತೆ ಮತ್ತು ಪುರುಷ ಸ್ವಯಂ ಸೇವಕರ ತಂಡಗಳನ್ನು ರಚಿಸಲಾಗಿದೆ.

ಈ ಪರಿಣಿತರ ತಂಡದ ಸದಸ್ಯರು ಮನೆ ಮನೆಗೆ ಭೇಟಿ ನೀಡಿ, ಕುಷ್ಟರೊಗದ ಬಗ್ಗೆ ಮಾಹಿತಿಯನ್ನು ನೀಡಿ ಪ್ರತಿಯೊಬ್ಬರ ದೇಹದ ಚರ್ಮದ ಮೇಲಿನ ಮಚ್ಚೆಗಳನ್ನು ಪರೀಕ್ಷಿಸಿ ಮುಂದಿನ ಚಿಕಿತ್ಸಾ ಕ್ರಮಕ್ಕಾಗಿ ವೈದ್ಯಾಧಿಕಾರಿಗಳು ಅಥವಾ ಚರ್ಮ ರೋಗ ತಜ್ಞರು ಹಾಗೂ ಜಿಲ್ಲಾ ಕುಷ್ಟ ರೋಗ ನಿರ್ಮೂಲನ ಅಧಿಕಾರಿಗಳು/ತಂಡದವರಲ್ಲಿ ಕಳುಹಿಸಿ ಉಚಿತವಾಗಿ ಸೂಕ್ತ ಚಿಕಿತ್ಸೆಯನ್ನುನೀಡಲಾಗುತ್ತದೆ ಎಂದು ಜಿಲ್ಲಾ ಕುಷ್ಟರೋಗ ನಿರ್ಮೂಲನ ಅಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕುಷ್ಠರೋಗದ ಬಗ್ಗೆ ಮಾಹಿತಿ: ಕುಷ್ಠರೋಗವು ಒಂದು ಸೋಂಕು ರೋಗ. ಇದು ಒಂದು ಸಾಮಾನ್ಯ ಸೋಂಕು ರೋಗವಾಗಿದ್ದು, ಮೈಕೋ ಬೆಕ್ಟರಿಯಂ ಲೆಪ್ರೆ ಎಂಬ ಸೂಕ್ಷ್ಮ ರೋಗಾಣುವಿನಿಂದ ಬರುವ ಸೋಂಕು ರೋಗವಾಗಿದೆ. ನಿಧಾನವಾಗಿ ಹರಡುವ ಸೋಂಕು ರೋಗ. ಇದು ಮುಖ್ಯವಾಗಿ ಚರ್ಮ ಹಾಗೂ ನರಗಳಿಗೆ ತಗಲುತ್ತದೆ. ರೋಗ ಬಡವರು, ಶ್ರೀಮಂತರು, ಗಂಡು ಹೆಣ್ಣು ಎಂಬ ಬೇದ ಭಾವವಿಲ್ಲದೇ ಯಾರಿಗಾದರೂ ಬರಬಹುದು. ಪ್ರಾಥಮಿಕ ಹಂತದಲ್ಲಿ ಚಿಕಿತ್ಸೆಗೊಳಪಡಿಸದಿದ್ದರೆ ಅಂಗವಿಕಲತೆಯನ್ನುಂಟು ಮಾಡಬಹುದು.



ಕುಷ್ಠರೋಗದ ಲಕ್ಷಣಗಳು: ದೇಹದ ಮೇಲೆ ಸ್ಪರ್ಶ ಜ್ಞಾನವಿಲ್ಲದ, ತಿಳಿ–ಬಿಳಿ ಅಥವಾ ತಾಮ್ರ ಬಣ್ಣದ ಮಚ್ಚೆಗಳು, ಕೈ ಕಾಲುಗಳಲ್ಲಿ ಜೋಮು ಹಿಡಿಯುವುದು, ಸ್ಪರ್ಶಜ್ಞಾನ ಇಲ್ಲದಿರುವುದು, ಮುಖದಲ್ಲಿ ಮತ್ತು ಕಿವಿಗಳ ಮೇಲೆ ಎಣ್ಣೆ ಸವರಿದಂತೆ ಹೊಳೆಯುವುದು ಮತ್ತು ಗಂಟುಗಳು ಕಾಣಿಸುವುದು.

ಕುಷ್ಠರೋಗದ ಚಿಕಿತ್ಸೆ: ಬಹು ಔಷಧಿ ಚಿಕಿತ್ಸೆ ಕುಷ್ಟರೋಗವನ್ನು ಸಂಪೂರ್ಣವಾಗಿ ಗುಣಪಡಿಸುತ್ತದೆ. ಚಿಕಿತ್ಸೆಯ ಅವಧಿ ಆರು ತಿಂಗಳಿನಿಂದ ಹನ್ನೆರಡು ತಿಂಗಳು ಇರುತ್ತದೆ. ಕುಷ್ಟರೋಗವನ್ನು ಗುಣಪಡಿಸುವ ಔಷಧಿಗಳು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರತಿ ದಿವಸ ಉಚಿತವಾಗಿ ದೊರೆಯುತ್ತವೆ.

ಕುಷ್ಠರೋಗವನ್ನು ನಿರ್ಮೂಲನೆ ಮಾಡುವ ವಿಧಾನ: ಹೊಸ ಕುಷ್ಟರೋಗಿಗಳನ್ನು ಪತ್ತೆ ಹಚ್ಚುವುದು ಹಾಗೂ ಬಹು ಔಷಧಿ ಚಿಕಿತ್ಸೆಗೆ ಒಳಪಡಿಸುವುದು. ಮೈ ಮೇಲಿನ ಚರ್ಮದ ತೊಂದರೆಗಳಿದ್ದಲ್ಲಿ ಪರೀಕ್ಷಿಸಿಕೊಳ್ಳಬೇಕು. ನಿಮ್ಮ ಕುಟುಂಬದ ಸದಸ್ಯರಿಂದ ನಿಮ್ಮ ನಿಮ್ಮಲ್ಲೇ ಪರೀಕ್ಷಿಸಿಕೊಳ್ಳಬಹುದು ಎಂದು ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

### ■ಪ್ರತ್ಯೇಕ ಮೈದಾನದ ಕನಸು ಸಾಕಾರಗೊಳ್ಳಲಿ: ದೇಶಪಾಂಡೆ ■ಕ್ರೀಡಾ ಸ್ಫೂರ್ತಿಯ ಜೊತೆಗೆ ಆಟದಾಚೆಗೂ ಇರುವ ಬದುಕು ಗಮನದಲ್ಲಿರಲಿ: ಯಾವಗಲ್ ■ಸಂಘಟನೆಯಿಂದ ಕಲ್ಯಾಣ ಕಾರ್ಯಗಳು ನಡೆಯಲಿ: ಮಹೇಶ

# ಕಲ್ಯಾಣ ಕರ್ನಾಟಕ ಕಪ್ ಕ್ರಿಕೆಟ್ ಟೂರ್ನಿಗೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲಾ ಕ್ರೀಡಾಂಗಣದಲ್ಲಿ ವಿವಿಧ ಚಟುವಟಿಕೆಗಳು ನಡೆಯುವುದರಿಂದ ಕ್ರೀಡಾಪಟುಗಳಿಗೆ ಪ್ರತ್ಯೇಕ ಖಾಸಗಿ ಮೈದಾನದ ಅಗತ್ಯವಿದೆ. ನೂರಾರು ಸದಸ್ಯರನ್ನು ಹೊಂದಿರುವ ಕೊಪ್ಪಳ ಕರ್ನಾಟಕ ವಾರಿಯರ್ಸ್ ಕ್ರೀಡಾ ಹಾಗೂ ಸಾಂಸ್ಕೃತಿಕ ಸಂಸ್ಥೆಯಿಂದ ಖಾಸಗಿ ಮೈದಾನ ನಿರ್ಮಿಸುವ ಕನಸು ನನಸಾಗಲಿ ಎಂದು ಕಲ್ಯಾಣ ಕರ್ನಾಟಕದ ಅಭಿವೃದ್ಧಿಪರ ಹೋರಾಟಗಾರ, ಹಿರಿಯ ಪತ್ರಕರ್ತ ಸಂತೋಷ್ ದೇಶಪಾಂಡೆ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಕೊಪ್ಪಳ ಕರ್ನಾಟಕ ವಾರಿಯರ್ಸ್ ಹಾಗೂ ಕ್ರೀಡಾ ಸಂಸ್ಥೆ ಆಯೋಜಿಸಿದ್ದ ಕಲ್ಯಾಣ ಕರ್ನಾಟಕ ಕಪ್ ಕ್ರಿಕೆಟ್ ಟೂರ್ನಿ ಉದ್ಘಾಟಿಸಿ ಅವರು ಮಾತನಾಡಿದರು.




ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ 371ಜೆ ಜಾರಿ ಮುನ್ನ ಈ ಭಾಗದ ಜನರಿಗೆ ಉದ್ಯೋಗಾವಕಾಶ, ಶಿಕ್ಷಣದ ಕೊರತೆ ಇತ್ತು. ಇದೀಗ ಆ ಸಮಸ್ಯೆ ಬಹುತೇಕ ಇತ್ಯರ್ಥವಾಗಿದ್ದರೂ ಸಣ್ಣಪುಟ್ಟ ದೋಷಗಳನ್ನು ಸರಿಪಡಿಸಬೇಕಿದೆ ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಮುಖಂಡ ರಾಜೇಶ್ ಯಾವಗಲ್ ಮಾತನಾಡಿ, ಆಟದಲ್ಲಿ ಕ್ರೀಡಾಸ್ಫೂರ್ತಿ ಇರಲಿ. ಜೊತೆಗೆ ಆಟದಾಚೆಗೆ ಇರುವ ವೈಯಕ್ತಿಕ ಬದುಕನ್ನು ಕಡೆಗಣಿಸಬಾರದು ಎಂದು ಕರೆ ನೀಡಿದರು.

ಮಹೇಶ್ ಮಾತನಾಡಿ, ಕ್ರಿಕೆಟ್ ಕ್ಲಬ್ ಉಗಮಗೊಂಡು ದಶಕ ಕಳೆದಿರುವುದು ಸಂತಸ. ಸಾಮಾಜಿಕ ಕಾರ್ಯಗಳ ಜೊತೆಗೆ ಸಂಘವು ಕಲ್ಯಾಣ ಕಾರ್ಯಗಳಿಗೂ ಮುಂದಾಗಲಿ ಎಂದು ಆಶಿಸಿದರು.

ಅಮರೇಶ ಹುಬ್ಬಳ್ಳಿ, ಮಲ್ಲನಗೌಡರ, ಗಿರೀಶ್ ಮುಂಡಾದ, ಮಲ್ಲು, ಕನಕಪ್ಪ, ಬಸವರಾಜ ಕರುಗಲ್ ಮತ್ತಿತರರು ಮಾತನಾಡಿದರು. ಶ್ರೀನಿವಾಸ ಗೋಂಧಳಿ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಗಣ್ಯರನ್ನು ಸತ್ಕರಿಸಿ, ಗೌರವಿಸಲಾಯಿತು.

ಈರಣ್ಣ ಪಗಡಾಲ ನಿರೂಪಿಸಿದರು. ಗಂಗಾಧರ ನೇವಾರ ವಂದಿಸಿದರು.

# ನಾಗರಿಕ ಮೌಲ್ಯದ ಕುರಿತು ಜಾಗೃತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಇನ್ನರ್ ವೀಲ್ ಕ್ಲಬ್ ಗದಗ–ಬೆಟಗೇರಿಯು ಗದುಗಿನ ಸಂಗೊಳ್ಳಿ ರಾಯಣ್ಣ ಪ್ರೌಢಶಾಲೆಯಲ್ಲಿ ನಾಗರಿಕ ಮೌಲ್ಯಗಳ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿತ್ತು.

ಕಾರ್ಯಕ್ರಮದಲ್ಲಿ ಕವಿತಾ ಬೇಲೇರಿ ಮಾತನಾಡಿ, ಮೊಬೈಲ್, ಕಂಪ್ಯೂಟರ್‌ನಂತಹ ಆಧುನಿಕ ತಂತ್ರಜ್ಞಾನಗಳ ಹಾವಳಿಯಿಂದ ನಮ್ಮ ಸಂಸ್ಕೃತಿ ಮತ್ತು ಸಂಪ್ರದಾಯ ಮರೆಯಾಗುತ್ತಿದೆ. ಆಧುನಿಕ ಯುಗದಲ್ಲಿ ಮಕ್ಕಳು ನಮ್ಮ ಸಂಸ್ಕೃತಿ, ಮೌಲ್ಯಗಳು ಮತ್ತು ಸಂಪ್ರದಾಯದಿಂದ ಹೊರಬರುತ್ತಿದ್ದಾರೆ. ಇಂದಿನ ಮಕ್ಕಳಿಗೆ ಭಾರತೀಯ ಸಂಸ್ಕೃತಿ ಮತ್ತು ಸಂಪ್ರದಾಯದೊಂದಿಗೆ ಅವರ ನಾಗರಿಕ ಮೌಲ್ಯಗಳ ಸಂಸ್ಕಾರಗಳನ್ನು ಕಲಿಸಿ ಬೆಳೆಸಬೇಕಾಗಿದೆ ಎಂದರು.



ಇನ್ನರ್ ವ್ಹೀಲ್ ಸಂಸ್ಥೆಯ ಅಧ್ಯಕ್ಷೆ ನಾಗರತ್ನ ಮಾರನಬಸರಿ ಶಾಲೆಯಲ್ಲಿ ಮಕ್ಕಳಿಗಾಗಿ ಏರ್ಪಡಿಸಿದ್ದ 'ನಾವು ಮನುಜರು' ಎಂಬ ವಿಷಯದ ಕುರಿತ ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ಅಶ್ವಿನಿ ಜಂಗನವಾರಿ, ಅರ್ಜುನ ಬೂದಿಕೊಪ್ಪನವರ, ಸ್ಪಂದನ ಗಗನದ ಇವರಿಗೆ ಬಹುಮಾನ ವಿತರಿಸಿದರು. ಶಾಲೆಯ ಮುಖ್ಯೋಪಾಧ್ಯಾಯೆ ಪಿ.ಟಿ. ಬಿಸನಳ್ಳಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಶಿಕ್ಷಕರಾದ ಎಮ್.ಬಿ. ಹರ್ತಿ ಸ್ವಾಗತಿಸಿದರು. ಎಮ್. ಕೆ. ಬೇವಿನಕಟ್ಟಿ ವಂದಿಸಿದರು. ಕಾರ್ಯದರ್ಶಿ ವೀಣಾ ತಿರ್ಲಾಪೂರ, ಐಎಸ್‌ಓ ಪುಷ್ಪಾ ಭಂಡಾರಿ, ಮಾಜಿ ಅಧ್ಯಕ್ಷರಾದ ಆಶಾ ಪಟ್ಟಣಶೆಟ್ಟಿ, ಸಿಎಲ್‌ಸಿಸಿ ಸುಮಾ ಪಾಟೀಲ, ಮೀನಾಕ್ಷಿ ಕೊರವಣ್ಣವರ ಉಪಸ್ಥಿತರಿದ್ದರು.

# ಬಾಕಿ ಪಾವತಿಸದ ವಾಣಿಜ್ಯ ಮಳಿಗೆಗಳಿಗೆ ಬೀಗ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಪಂಚಾಯಿತಿ ಮಳಿಗೆಗಳಲ್ಲಿ ತಮ್ಮ ವ್ಯಾಪಾರ–ವಹಿವಾಟು ಮಾಡಿಕೊಂಡಿದ್ದ ವ್ಯಾಪಾರಸ್ಥರು ಕಳೆದ 7 ವರ್ಷಗಳಿಂದ ಪಟ್ಟಣ ಪಂಚಾಯಿತಿಗೆ ಬಾಡಿಗೆ ಕಟ್ಟದೆ ಬಾಕಿ ಉಳಿಸಿಕೊಂಡಿದ್ದರು. ಅಕ್ಟೋಬರ್ 9ರಂದು ಶಾಸಕ ಜಿ.ಎಸ್. ಪಾಟೀಲರ ಉಪಸ್ಥಿತಿಯಲ್ಲಿ, ಅಧ್ಯಕ್ಷ ಫಕೀರಪ್ಪ ಮಳ್ಳಿಯವರ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಪ.ಪಂ. ಮಳಿಗೆಗಳ ಬಾಡಿಗೆ ವಿಷಯ ಚರ್ಚೆಗೆ ಬಂದಾಗ ಬಾಡಿಗೆ ಬಾಕಿ ಕಟ್ಟದಿರುವ ಮಾಲಿಕರಿಂದ ಆದಷ್ಟು ಬೇಗ ಬಾಕಿ ವಸೂಲಿ ಮಾಡಿಕೊಂಡು ಟೆಂಡರ್ ಪ್ರಕ್ರಿಯೆಗೆ ಮುಂದಾಗಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಅಧಿಕಾರಿಗಳಿಗೆ ಹೇಳಿದ್ದರು. ಅದಕ್ಕೆ ಗುರುವಾರದವರೆಗೂ ಅವಕಾಶ ನೀಡಲಾಗಿತ್ತು.



ಅದರಂತೆ ಹಲವು ವರ್ಷಗಳಿಂದ ಬಾಕಿ ಉಳಿಸಿಕೊಂಡಿದ್ದ ಪಟ್ಟಣ ಪಂಚಾಯಿತಿಯ 7 ವಾಣಿಜ್ಯ ಮಳಿಗೆಗಳಿಗೆ ಶುಕ್ರವಾರ ಪ.ಪಂ ಅಧಿಕಾರಿಗಳು, ಸಿಬ್ಬಂದಿ ಬೀಗ ಜಡಿದರು. ಬಾಡಿಗೆ ಹಣ ಕಟ್ಟುವಂತೆ ವರ್ತಕರಿಗೆ ಮೌಖಿಕವಾಗಿ ಮತ್ತು ಲಿಖಿತವಾಗಿ ನೋಟೀಸ್ ನೀಡಿದ್ದರೂ ಯಾವುದೇ ಪ್ರಯೋಜನವಾಗಿರಲಿಲ್ಲ. ಹಾಗಾಗಿ ಮಳಿಗೆಗಳಿಗೆ ಬೀಗ ಹಾಕುವ ಅನಿವಾರ್ಯತೆ ಬಂದಿದೆ. ಕಳೆದ ಹಲವು ವರ್ಷಗಳಿಂದ ಪ.ಪಂ ವಾಣಿಜ್ಯ ಮಳಿಗೆಗಳಲ್ಲಿ ವ್ಯಾಪಾರ ವಹಿವಾಟು ಮಾಡುತ್ತಿರುವ ವರ್ತಕರು ಬಾಡಿಗೆ ಹಣವನ್ನು ನೀಡದೇ ಪಟ್ಟಣದ ಅಭಿವೃದ್ಧಿಗೆ ಹಿನ್ನಡೆಯಾಗಿತ್ತು. ಶುಕ್ರವಾರ 7 ವಾಣಿಜ್ಯ ಮಳಿಗೆಗಳಿಗೆ ಬೀಗ ಹಾಕಲಾಗಿದೆ. ಅವುಗಳಿಂದ ಸುಮಾರ 8 ಲಕ್ಷ 8 ಸಾವಿರ ರೂ. ಬಾಡಿಗೆ ಬಾಕಿ ಇದೆ. ಬಾಡಿಗೆ ಕಟ್ಟಲು ಸಾಕಷ್ಟು ಬಾರಿ ನೋಟೀಸ್ ಮತ್ತು ಸಮಯ ನೀಡಲಾಗಿತ್ತು. ಆದರೆ, ಯಾವುದೇ ಸ್ಪಂದನೆ ನೀಡದ ಹಿನ್ನಲೆಯಲ್ಲಿ ಬೀಗ ಹಾಕಲಾಗಿದೆ ಎಂದು ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಹೇಳಿದರು.

ಈ ಸಂದರ್ಭದಲ್ಲಿ ಎಸ್. ಕೆ. ದೊಡ್ಡಣ್ಣವರ, ರಮೇಶ ಹಲಗಿ, ಅಡಿವೆಪ್ಪ ಮೆಣಸಗಿ, ವಿ.ಐ. ಮಡಿವಾಳರ, ಉದಯ ಮುದೇನಗುಡಿ, ಮಹಾದೇವ ಮ್ಯಾಗೇರಿ, ಎನ್.ಬಿ. ಬೇಲೇರಿ, ಪಿ.ಜಿ. ರಾಂಪೂರ, ನೀಲಪ್ಪ ಚಳ್ಳಮರದ, ನಿಂಗಪ್ಪ ಮಡಿವಾಳರ, ಸಿ.ವಿ. ಹೊನವಾಡ, ಜೆ.ಡಿ. ಬಂಕಾಪೂರ ಇದ್ದರು.

# ವಿದ್ಯಾರ್ಥಿಗಳಿಂದ ವಿದ್ಯುತ್ ಉಪಕೇಂದ್ರಕ್ಕೆ ಭೇಟಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ವಿದ್ಯುತ್ ಇಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿಗಳು ಸ್ಥಳೀಯ 440 ಕೆ.ವಿ. ವಿದ್ಯುತ್ ಉಪಕೇಂದ್ರಕ್ಕೆ ಶೈಕ್ಷಣಿಕ ಭೇಟಿಯನ್ನು ನೀಡಿದರು. ಈ ಪ್ರವಾಸವು ವಿದ್ಯುತ್ ಉತ್ಪಾದನೆ, ವಿತರಣೆ ಮತ್ತು ನಿರ್ವಹಣೆಯ ಕಾರ್ಯಾಚರಣೆಯ ಕುರಿತು ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಅರಿವು ನೀಡುವ ಉದ್ದೇಶವನ್ನು ಹೊಂದಿತ್ತು. ಪ್ರೊ. ಮಲ್ಲಿಕಾರ್ಜುನ ಜಿ.ಡಿ. ಮತ್ತು ಪ್ರೊ. ತೆಹಸಿನ್ ಶಿಗ್ಲಿ ಅವರ ನೇತೃತ್ವದಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ವಿದ್ಯಾರ್ಥಿಗಳಿಗೆ ಉಪಕೇಂದ್ರದ ಇಂಜಿನಿಯರ್ ಶಬ್ಬಿರ ಮುಲ್ಲಾ, ಬೃಹತ್ ವಿದ್ಯುತ್ ಪರಿವರ್ತಕಗಳಲ್ಲಿ ವಿದ್ಯುತ್ ವರ್ಗಾವಣೆ ಪ್ರಕ್ರಿಯೆಯ ನೈಸರ್ಗಿಕ ಸಮೀಕರಣವನ್ನು ವಿವರಿಸಿದರು. ಉಪಕೇಂದ್ರಗಳ ಮೂಲಕ ವಿದ್ಯುತ್‌ವಿತರಣೆಯ ದಕ್ಷತೆ ಮತ್ತು ಸುರಕ್ಷತೆ ಹೇಗೆ ನಿರ್ವಹಿಸಲ್ಪಡುತ್ತದೆ ಎಂಬುದನ್ನು ತಾಂತ್ರಿಕವಾಗಿ ತಿಳಿಯಲು ಈ ಭೇಟಿಯು ಸಹಕಾರಿಯಾಗಿದೆ ಎಂದು ವಿದ್ಯಾರ್ಥಿಗಳು ತಮ್ಮ ಅನುಭವವನ್ನು ಹಂಚಿಕೊಂಡರು.




ಈ ಉಪಕೇಂದ್ರದ ಪ್ರವಾಸದಲ್ಲಿ, ವಿದ್ಯಾರ್ಥಿಗಳಿಗೆ ವಿದ್ಯುತ್ ಮಾರ್ಗದ ತಾಂತ್ರಿಕ ವಿವರಗಳು, ಟ್ರಾನ್ಸ್‌ಫಾರ್ಮರ್‌ಗಳ ಕಾರ್ಯ, ಸ್ವಯಂಚಾಲಿತ ನಿಯಂತ್ರಣ ವ್ಯವಸ್ಥೆ ಮತ್ತು ರಕ್ಷಣಾತ್ಮಕ ಸಾಧನಗಳ ಕುರಿತು ವಿಶದ ವಿವರಣೆ ನೀಡಲಾಯಿತು. ಕಾಲೇಜು ಉಪನ್ಯಾಸಕರು ಮತ್ತು ಉಪಕೇಂದ್ರದ ಇಂಜಿನಿಯರ್‌ಗಳು ವಿದ್ಯಾರ್ಥಿಗಳೊಂದಿಗೆ ಇದ್ದು, ಎಲ್ಲಾ ತಾಂತ್ರಿಕ ವಿಚಾರಗಳನ್ನು ಅರ್ಥಮಾಡಿಕೊಳ್ಳುವಲ್ಲಿ ನೆರವಾದರು.

ಇದೀಗ, ವಿದ್ಯಾರ್ಥಿಗಳು ತಮ್ಮ ಸಿದ್ಧಾಂತಾತ್ಮಕ ಜ್ಞಾನವನ್ನು ಪ್ರಾಯೋಗಿಕವಾಗಿ ಅನ್ವಯಿಸಲು ಹೆಚ್ಚಿನ ಪ್ರೇರಣೆಯನ್ನು ಹೊಂದಿದ್ದಾರೆ ಎಂದು ಕಾಲೇಜಿನ ಪ್ರಿನ್ಸಿಪಾಲರಾದ ಡಾ. ಎಮ್. ಎಮ್. ಅವಟಿ ಅವರು ಹೇಳಿದರು. ಈ ಕ್ಷೇತ್ರದಲ್ಲಿನ ಜಾಗತಿಕ ಮಟ್ಟದ ತಂತ್ರಜ್ಞಾನಗಳು ಮತ್ತು ತಾಂತ್ರಿಕ ಅಡಚಣೆಗಳನ್ನು ಹೇಗೆ ನಿರ್ವಹಿಸುತ್ತಾರೆ ಎಂಬುದರ ಕುರಿತು ವಿದ್ಯಾರ್ಥಿಗಳಿಗೆ ಹೆಚ್ಚಿನ ತಿಳುವಳಿಕೆಯನ್ನು ನೀಡಿದ ಘಟನೆಯಾಯಿತು.

ಈ ರೀತಿಯ ಶೈಕ್ಷಣಿಕ ಪ್ರವಾಸವು ವಿದ್ಯಾರ್ಥಿಗಳಲ್ಲಿ ತಾಂತ್ರಿಕ ಜ್ಞಾನವರ್ಧನಕ್ಕಾಗಿಯೇ ಅಲ್ಲದೆ, ಭವಿಷ್ಯದ ವೃತ್ತಿಜೀವನದತ್ತ ಆಳವಾದ ಪ್ರೇರಣೆಯನ್ನು ನೀಡಲು ಸಹಕಾರಿ ಆಗುವುದರಿಂದ ಇಂತಹ ಕಾರ್ಯಕ್ರಮಗಳಿಗೆ ಕಾಲೇಜಿನಲ್ಲಿ ಯಾವಾಗಲೂ ಅವಕಾಶ ನೀಡಲಾಗುತ್ತದೆ ಎಂದು ಎಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥರಾದ ಡಾ. ಈರಣ್ಣ ಕೊರಚಗಾಂವ ಅವರು ತಿಳಿಸಿದರು.

# 'ಹಳೆ ಬೇರು ಹೊಸ ಚಿಗುರು' ಸಂವಾದ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯದಲ್ಲಿ ವಿದ್ಯಾರ್ಥಿಗಳೊಂದಿಗೆ 'ಹಳೆಯ ಬೇರು ಹೊಸ ಚಿಗುರು' ಸಂವಾದ ಕಾರ್ಯಾಗಾರ ಏರ್ಪಡಿಸಲಾಗಿತ್ತು.

ಕಾಲೇಜಿನಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಾದ ಆಫ್ರೀನ ಮುಲ್ಲಾ ಹಾಗೂ ವಿನಾಯಕ ಮೆಹರವಾಡೆ, ಸಿಎ ಪರೀಕ್ಷೆ ಪಾಸಾಗಿ ಸಂಸ್ಥೆಗೆ ಕೀರ್ತಿ ತಂದ ವಿದ್ಯಾರ್ಥಿಗಳು ಸಿಎ ಪರೀಕ್ಷೆಯ ತಯಾರಿಯನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು. ಆಫ್ರೀನಾ ಮಾತನಾಡಿ, ಸತತ ಅಭ್ಯಾಸದಿಂದ ಹಾಗೂ ಉಪನ್ಯಾಸಕರ ಮಾರ್ಗದರ್ಶನದಿಂದ, ತಂದೆ–ತಾಯಿಯರ ಆಶೀರ್ವಾದದಿಂದ ಸಿಎ ಪರೀಕ್ಷೆಯಲ್ಲಿ ಪಾಸಾಗಲು ಸಾಧ್ಯವಾಯಿತು ಎಂದರು.




ವಿನಾಯಕ ಮೆಹರವಾಡೆ ಮಾತನಾಡಿ, ಮೊಬೈಲ್ ಫೋನನ್ನು ಹಿತಮಿತವಾಗಿ ಬಳಸಲು ತಿಳಿಸಿ, ಪ್ರತಿದಿನ 8 ಗಂಟೆ ಅಧ್ಯಯನ ಮಾಡಿದಾಗ ಸಾಧಕರ ಸಾಲಿನಲ್ಲಿ ತಮ್ಮ ಹೆಸರು ಕೂಡಾ ಬರುವುದು ಎಂದರು.

ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಮಹಾವಿದ್ಯಾಲಯದ ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ಹಳೆಯ ವಿದ್ಯಾರ್ಥಿಗಳ ಸಾಧನೆಯನ್ನು ಸ್ಮರಿಸಿ ಸಂತಸ ವ್ಯಕ್ತ ಪಡಿಸಿ, ಪ್ರತಿ ವಿದ್ಯಾರ್ಥಿಗಳ ಪ್ರತಿಭೆ ಅರಳಬೇಕಾದರೆ ನಿರ್ದಿಷ್ಟ ಗುರಿ ಹೊಂದಿರಬೇಕು. ಗುರು–ಹಿರಿಯರ ಮಾರ್ಗದರ್ಶನದೊಂದಿಗೆ ಉತ್ತಮ ಸಾಧಕರಾಗಿರಿ ಎಂದರು.

ಸಂಸ್ಥೆಯ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಬಿಕಾಂ ಸಂಯೋಜಕರಾದ ಪ್ರೊ. ಅಶ್ವಿನಾ ಡಿ, ಬಿಬಿಎ ಸಂಯೋಜಕಿ ಪ್ರೊ. ಚೈತ್ರಾ ಡಿ ಹಾಗೂ ಪಿಯು ಸಂಯೋಜಕರಾದ ಪ್ರೊ ಶಾಹಿದಾ ಶಿರಹಟ್ಟಿ ಉಪಸ್ಥಿತರಿದ್ದರು.

ಲಿಂಗಾಂಗ ಸಾಮರಸ್ಯದ ದಶಮಾನೋತ್ಸವ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಮಾನವೀಯ ಮೌಲ್ಯಗಳು ಬದಲಾಗದಿರಲಿ

■ ವಿಜಯಸಾಕ್ಷಿ ಸುದ್ದಿ, ಕುಷ್ಟಗಿ

ಸಮಾಜದಲ್ಲಿ ಸ್ಥಾನ-ಮಾನಗಳು ಹಾಗೂ ಆಸ್ತಿ-ಪಾಸ್ತಿಗಳು ಕೆಲವೊಮ್ಮೆ ಬದಲಾಗದಬಹುದು. ಆದರೆ ಮಾನವೀಯ ಮೌಲ್ಯಗಳು ಮತ್ತು ಮಾನವೀಯ ಸಂಬಂಧಗಳು ಎಂದೆಂದಿಗೂ ಬದಲಾಗದಂತಿರಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ತಾಲೂಕಿನ ಚಳಗೇರಾ ಹಿರೇಮಠದ ಲಿಂ.ವಿರೂಪಾಕ್ಷಲಿಂಗ ಶ್ರೀಗಳವರ ಲಿಂಗಾಂಗ ಸಾಮರಸ್ಯದ ದಶಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜಗತ್ತು ಮತ್ತು ಜನ ಎಷ್ಟೇ ಬದಲಾದರೂ ಮಾನವ ಸಂಬಂಧಗಳು ಸಡಿಲಗೊಳ್ಳಬಾರದು. ಬಾಂಧವ್ಯ ಸಂಬಂಧಗಳನ್ನು ಮರೆತರೆ ಮನುಷ್ಯನಿಗೂ ಯಂತ್ರಕ್ಕೂ ಯಾವುದೇ ವ್ಯತ್ಯಾಸ ಇರುವುದಿಲ್ಲ. ವ್ಯಕ್ತಿಗೆ ಕೊಳೆ ಅಂಟಿದರೆ ಶುದ್ಧ ಮಾಡಬಹುದು. ವ್ಯಕ್ತಿತ್ವವೇ ಕೊಳಕಾಗಿದ್ದರೆ ತೊಳೆಯುವುದು ಕಷ್ಟ. ವಿನಯ ಸರಳತೆ ಸೌಜನ್ಯಗಳು ವ್ಯಕ್ತಿತ್ವಕ್ಕೆ ಶೋಭೆ ನೀಡುವ



ಆಭರಣಗಳಷ್ಟೇ ಅಲ್ಲ, ಸುತ್ತ ಮುತ್ತಲ ವಾತಾವರಣವನ್ನು ಪರಿಶುದ್ಧಗೊಳಿಸುವ ಶಕ್ತಿಯಿರುತ್ತದೆ.

ಕಷ್ಟ ಬಂದಾಗ ಕಲ್ಲಿನಂತಿರಬೇಕು. ಸುಖ ಬಂದಾಗ ಹೂವಿನಂತೆ ಮಧುರವಾಗಿರಬೇಕು. ಲಿಂ.ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಭಕ್ತರ ಬಾಳಿನಲ್ಲಿ ಸಂಸ್ಕಾರ ಸಂಸ್ಕೃತಿಯನ್ನು ಬೋಧಿಸಿ ಸನ್ಮಾರ್ಗಕ್ಕೆ ಕರೆತಂದ ಕೀರ್ತಿ ಅವರಿಗೆ ಸಲ್ಲುತ್ತದೆ. ವೀರಶೈವ ಧರ್ಮ ಸಂಹಿತೆ ಮತ್ತು ಶ್ರೀ ಜಗದ್ಗುರು ರೇಣುಕಾಚಾರ್ಯರ ಆದರ್ಶ ಮೌಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ವಿರೂಪಾಕ್ಷಲಿಂಗ ಶ್ರೀಗಳು ಶ್ರಮಿಸಿದ್ದನ್ನು ಮರೆಯಲಾಗದೆಂದರು.

ಸಮಾರಂಭ ಉದ್ಘಾಟಿಸಿದ ಮಾಜಿ ಮುಖ್ಯ ಮಂತ್ರಿ-ಸಂಸದ ಜಗದೀಶ ಶೆಟ್ಟರ್ ಮಾತನಾಡಿ, ಒಳ್ಳೆಯತನಕ್ಕೆ ಬೆಲೆ ಇಲ್ಲ ಎನ್ನುವುದು ಎಷ್ಟು ಸತ್ಯವೋ ಆ ಒಳ್ಳೆಯತನ ಕೈ ಬಿಡುವುದಿಲ್ಲ ಅನ್ನುವುದೂ ಅಷ್ಟೇ ಸತ್ಯ. ಬದುಕಿಗೆ ಭಯ ಮುಖ್ಯವಲ್ಲ, ಭರವಸೆ ಮುಖ್ಯ. ಲಿಂ.ವಿರೂಪಾಕ್ಷಲಿಂಗ ಶಿವಾಚಾರ್ಯರು ತಮ್ಮ ಬದುಕನ್ನು ಭಕ್ತರ ಕಲ್ಯಾಣಕ್ಕಾಗಿ ಸದಾ ಮುಡುಪಾಗಿಟ್ಟಿದ್ದರು

ನೇತೃತ್ವ ವಹಿಸಿದ ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮುಖವಾಡದ ಬದುಕು ಮೂರು ದಿನ. ಬಣ್ಣದ ಬದುಕು ಆರು ದಿನ. ನಿಯತ್ತಿನ ಬದುಕು ನೂರು ದಿನ. ಸಂಪತ್ತು ಉಳ್ಳವರು ಶ್ರೀಮಂತರಲ್ಲ. ಸಂತಸ ಉಳ್ಳಾತನೇ ನಿಜವಾದ ಶ್ರೀಮಂತ. ಲಿಂ.ವಿರೂಪಾಕ್ಷಲಿಂಗ ಶಿವಾಚಾರ್ಯರು ತಾವು ಕಷ್ಟ ಅನುಭವಿಸಿ ನಂಬಿದ ಭಕ್ತರ ಬಾಳಿಗೆ ಬೆಳಕನ್ನು ಕರುಣಿಸಿದ ಕಾರುಣ್ಯ ಮೂರ್ತಿಯೆಂದರು.

ಎಂದರು.

ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಅಧ್ಯಕ್ಷತೆ ವಹಿಸಿದ್ದರು. ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು, ಎಮ್ಮಿಗನೂರು ವಾಮದೇವ ಮಹಂತ ವೀರಭದ್ರ ಶಿವಾಚಾರ್ಯರು, ನರೇಗಲ್ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಮಾತನಾಡಿದರು.

ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕ, ಶಾಸಕ ದೊಡ್ಡನಗೌಡ ಹೆಚ್.ಪಾಟೀಲ 100 ವಿದ್ಯಾರ್ಥಿಗಳ ವಿದ್ಯಾರ್ಥಿ ನಿಲಯಕ್ಕೆ ಶಿಲಾನ್ಯಾಸ ನೆರವೇರಿಸಿದರು. ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದ ರಾಜಶೇಖರ್ ಹಿಟ್ನಾಳ, ಮಾಜಿ ಸಂಸದ ಸಂಗಣ್ಣ ಕರಡಿ, ಮಾಜಿ ಶಾಸಕರಾದ ಅಮರೇಗೌಡ ಪಾಟೀಲ ಬಯ್ಯಾಪುರ, ಕೆ.ಶರಣಪ್ಪ ವಕೀಲರು, ಪರಣ್ಣ ಮುನವಳ್ಳಿ, ಸಮಾಜ ಸೇವಕ ಎಸ್.ಆರ್. ನವಲಿ ಹಿರೇಮಠ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ಈ ಪವಿತ್ರ ಸಮಾರಂಭದಲ್ಲಿ ಹರಸೂರು ಸಿದ್ಧರಾಮ ಶಿವಾಚಾರ್ಯರು, ಮಂಗಳೂರು ಸಿದ್ಧಲಿಂಗ ಶಿವಾಚಾರ್ಯರು, ಗುಳೇದಗುಡ್ಡದ ಒಪ್ಪತ್ತೇಶ್ವರ ಸ್ವಾಮಿಗಳು, ಕಲಾದಗಿ ಗಂಗಾಧರ ಶಿವಾಚಾರ್ಯರು, ಬಿಕನಳ್ಳಿ ಸಿದ್ಧೇಶ್ವರ ಶಿವಾಚಾರ್ಯರು ಸೇರಿದಂತೆ 25 ಜನ ಮಠಾಧೀಶರು ಪಾಲ್ಗೊಂಡಿದ್ದರು.

ದಾನಿಗಳಿಗೆ ಮತ್ತು ಶ್ರೀ ಮಠದ ಶಿಷ್ಯರಿಗೆ ಸ್ಮರಣಿಕೆ ಫಲ ಪುಷ್ಪವಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ 3 ಜೋಡಿ ನವ ದಂಪತಿಗಳು ವೈವಾಹಿಕ ಜೀವನಕ್ಕೆ ಪಾದಾರ್ಪಣೆ ಮಾಡಿದರು.


ಕಪ್ಪತ್ತಗುಡ್ಡ ರಕ್ಷಣೆ ಕುರಿತು ಮುಖ್ಯಮಂತ್ರಿಗಳಿಗೆ ಸಭಾಪತಿ ಬಸವರಾಜ ಹೊರಟ್ಟಿ ಪತ್ರ

# ಸರಕಾರ ನಂಬುಗೆ ಕಳೆದುಕೊಳ್ಳದಿರಲಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ/ಗದಗ

ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಕರೆಯಿಸಿಕೊಳ್ಳುವ ಕಪ್ಪತ್ತಗುಡ್ಡ ತನ್ನ ಒಡಲಲ್ಲಿ ಸಾವಿರಾರು ಔಷಧೀಯ ಗುಣವುಳ್ಳ ಸಸ್ಯ ಸಂಪತ್ತನ್ನು ಹೊಂದಿದ ನಾಡಿನ ಏಕೈಕ ಅಪರೂಪದ ತಾಣವಾಗಿದೆ. ಇದನ್ನು ಸಂರಕ್ಷಿಸಿಕೊಂಡು ಹೋಗುವ ದೊಡ್ಡ ಹೊಣೆಗಾರಿಕೆ, ಕಾಳಜಿ ನಮ್ಮೆಲ್ಲರ ಮೇಲಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿಯವರು ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಮುಖ್ಯಮಂತ್ರಿಗಳಿಗೆ ಪತ್ರ ಬರೆದು, ಕಪ್ಪತ್ತಗುಡ್ಡ ಸಂರಕ್ಷಣೆಗಾಗಿ ದಶಕಗಳಿಂದ ಜನಪರ ಹೋರಾಟಗಾರರು, ಮಠಾಧೀಶರು ಹೋರಾಟ ಮಾಡುವ ಮೂಲಕ ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆ ನಡೆಯದಂತೆ ಒತ್ತಾಯಿಸುತ್ತಾ ಬಂದಿದ್ದಾರೆ. ಆದಾಗ್ಯೂ ಗಣಿಗಾರಿಕೆಗಾಗಿ ಉದ್ಯಮಿಗಳು ತಮ್ಮ ಪ್ರಯತ್ನವನ್ನು ಬಿಟ್ಟಿಲ್ಲ. ಈ ಕುರಿತು 28 ಪ್ರಸ್ತಾವನೆಗಳು ಸರಕಾರದ ಮುಂದೆ ಬಂದಿದ್ದವು. ಈ ವಿಷಯಗಳ ಕುರಿತು ಕಳೆದ 15 ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ವನ್ಯಜೀವಿ ಮಂಡಳಿ ಸಭೆಯಲ್ಲಿ ವನ್ಯಜೀವಿ ಧಾಮ ಎಂದು ಘೋಷಿತವಾಗಿರುವ ಕಪ್ಪತ್ತಗುಡ್ಡದಿಂದ 10 ಕಿ.ಮೀ ವ್ಯಾಪ್ತಿಯಲ್ಲಿ ಗಣಿಗಾರಿಕೆ ಆರಂಭಿಸಲು ಬಂದ ಪ್ರಸ್ತಾವನೆಗಳನ್ನು ಪರಿಶೀಲಿಸಲು ನಡೆದ ಸಭೆಯಲ್ಲಿ ಮುಂದೂಡಿರುವುದು



ಸ್ವಾಗತಾರ್ಹ.

ಆದರೆ ಸಂಪೂರ್ಣ ಈ ಪ್ರಸ್ತಾವನೆಗಳನ್ನು ತಿರಸ್ಕರಿಸಿ ಈ ಭಾಗದಲ್ಲಿ ಯಾವುದೇ ಗಣಿಗಾರಿಕೆಯನ್ನು ಹಾಗೂ ಇತರೆ ಉದ್ಯಮಗಳನ್ನು ಆರಂಭಿಸಲು ಅನುಮತಿ ನೀಡುವುದಿಲ್ಲವೆಂದು ಆದೇಶ ಹೊರಡಿಸಬೇಕಾಗಿತ್ತು. ಕೇವಲ ಪ್ರಸ್ತಾವನೆಗಳನ್ನು ಮುಂದೂಡಿರುವುದರಿಂದ ಉತ್ತರ ಕರ್ನಾಟಕ ಜನರಿಗೆ ಹಾಗೂ ಪರಿಸರ ಸಂರಕ್ಷಣೆಯ ಪರ ಹೋರಾಟಗಾರರಿಗೆ ಸಂಶಯ ಮೂಡುವುದರ ಜೊತೆಗೆ ಸರಕಾರದ ಮೇಲೆ ನಂಬಿಕೆ ಇಲ್ಲದಂತಹ ವಾತಾವರಣ ಮೂಡಿದ್ದು ವಿಷಾದನೀಯ.


ಕಪ್ಪತ್ತಗುಡ್ಡವನ್ನು ಸೂಕ್ಷ್ಮವಲಯ ವ್ಯಾಪ್ತಿಯಂದು ಸದಾ ಸರಕಾರ ಹೇಳಿಕೊಂಡು ಬಂದಿದೆ ಈ ಕುರಿತು ಆ ಪ್ರದೇಶದಲ್ಲಿ ಯಾವುದೇ ಗಣಿಗಾರಿಕೆ ನಡೆಸದಂತೆ ಸ್ಪಷ್ಟ

ಈ ಆಪಾದನೆಯಿಂದ ಮಾನ್ಯ ಮುಖ್ಯಮುಂತ್ರಿಗಳು ಮುಕ್ತರಾಗಿ ಸಂಪೂರ್ಣ ಪ್ರಸ್ತಾವನೆಗಳನ್ನು ರದ್ದುಗೊಳಿಸಿ ಕಪ್ಪತ್ತಗುಡ್ಡ ಸಂರಕ್ಷಣೆಗೆ ಸ್ಪಷ್ಟ ಆದೇಶ ನೀಡುವ ಮೂಲಕ ನಾಡಿನ ಏಕೈಕ ಸಸ್ಯ ಸಂಪತ್ತನ್ನು ಹೊಂದಿದ ಕಪ್ಪತ್ತಗುಡ್ಡ ಉಳಿಸುವಲ್ಲಿ ದಿಟ್ಟ ಹೆಜ್ಜೆಯನ್ನು ಇಟ್ಟು, ಮುಖ್ಯಮಂತ್ರಿಗಳು ತಮ್ಮ ಹೆಗ್ಗುರುತುಗಳನ್ನು ಮೂಡಿಸಲಿ. ಆ ಮೂಲಕ ಉತ್ತರ ಕರ್ನಾಟಕ ಜನತೆಯ ವಿಶೇಷ ಪ್ರೀತಿಯನ್ನು ಗಳಿಸುವಂತಾಗಲಿ ಎಂದು ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ.

ಆದೇಶ ನೀಡಬೇಕು. ಕೇವಲ ಪ್ರಸ್ತಾವನೆಗಳನ್ನು ಮಂದೂಡುವುದರಿಂದ ಜನಸಾಮಾನ್ಯರಲ್ಲಿ ಆತಂಕಗಳು, ಸಂಶಯಗಳು ಮೂಡುವುದು ಸಹಜ. ಇದಕ್ಕೆಲ್ಲ ಪೂರ್ಣವಿರಾಮ ನೀಡಬೇಕಿದೆ. ಕಪ್ಪತ್ತಗುಡ್ಡವು ಜೀವ ವೈವಿಧ್ಯ ಹಾಗೂ ಸಸ್ಯವೈವಿಧ್ಯಗಳ ಪ್ರದೇಶವಾಗಿದ್ದು, ಸಾವಿರಾರು ವನಸ್ಪತಿ ಸಸ್ಯಗಳ ಆಗರವಾಗಿರುವ ಈ ಪ್ರದೇಶವು ನಾಡಿನ ಅಮೂಲ್ಯ ಆಸ್ತಿಯಾಗಿದೆ. ಈ ಸಸ್ಯಸಂಪತ್ತು ಹೊಂದಿದ ಕಪ್ಪತ್ತಗುಡ್ಡವನ್ನು ಕಳ್ಳಕಾಕರಿಂದ ದೂರವಿಟ್ಟು ಕಪ್ಪತ್ತಗುಡ್ಡ ಸಂರಕ್ಷಿಸಲು ಮುಖ್ಯಮಂತ್ರಿಗಳು ದಿಟ್ಟ ಕ್ರಮ ಕೈಗೊಳ್ಳಬೇಕೆಂದು ಸಭಾಪತಿ ಬಸವರಾಜ ಹೊರಟ್ಟಿಯವರು ಮುಖ್ಯಮಂತ್ರಿಗಳಿಗೆ ಬರೆದ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಸ್ಮಾರ್ಟ್ ಕ್ಲಾಸ್, ಕ್ರೀಡಾ ಸಾಮುಗ್ರಿ ಉದ್ಘಾಟಿಸಿದ ಬಿ.ಎಂ. ಹರಪನಹಳ್ಳಿ

# ಶಿಕ್ಷಣಕ್ಕೆ ಸ್ಮಾರ್ಟ್ ಕ್ಲಾಸ್ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಗುಣಮಟ್ಟದ ಶಿಕ್ಷಣ ಪಡೆಯಲು ಸ್ಮಾರ್ಟ್ ಕ್ಲಾಸ್‌ಗಳು ತುಂಬಾ ಸಹಕಾರಿಯಾಗಿವೆ ಎಂದು ಸಾಹಿತಿ ಬಿ.ಎಂ. ಹರಪನಹಳ್ಳಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಹೆಣ್ಣು ಮಕ್ಕಳ ಶಾಲೆಯಲ್ಲಿ ಬೆಂಗಳೂರ ಪ್ರತಿಬಿಂಬ ಟ್ರಸ್ಟ್, ರುಕ್ಮಿಣಿಬಾಯಿ ಹಾಗೂ ಕೃಷ್ಣರಾವ್ ಯಾವಗಲ್ಲ ಇವರ ಸ್ಮರಣಾರ್ಥವಾಗಿ ಸ್ಮಾರ್ಟ್ ಕ್ಲಾಸ್ ಹಾಗೂ ಕ್ರೀಡಾ ಸಾಮುಗ್ರಿ ಉದ್ಘಾಟಿಸಿ ಮಾತನಾಡಿದರು.


ಇಂದಿನ ಆಧುನಿಕ ತಂತ್ರಜ್ಞಾನ ಯುಗದಲ್ಲಿ ಸರಕಾರಿ ಶಾಲೆಗಳಲ್ಲಿ ಸ್ಮಾರ್ಟ್ ಕ್ಲಾಸ್‌ಗಳ ಅಗತ್ಯವಿದ್ದು, ಮಕ್ಕಳಲ್ಲಿ ಸೃಜನಾತ್ಮಕ ಶಿಕ್ಷಣ, ಗುಣಮಟ್ಟದ ಕಲಿಕೆಗೆ ಸ್ಮಾರ್ಟ್ ಕ್ಲಾಸ್‌ಗಳ ತುಂಬಾ ಅಗತ್ಯವಾಗಿರುವುದನ್ನು ಮನಗಂಡು ಪ್ರತಿಬಿಂಬ ಟ್ರಸ್ಟ್ ಸರಕಾರಿ ಶಾಲೆಗಳ ಮಕ್ಕಳ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವುದು ಶ್ಲಾಘನೀಚು. ಶಿಕ್ಷಕರು ಹಾಗೂ ಮಕ್ಕಳು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ತಂದೆ-ತಾಯಿಗಳ ಹಾಗೂ ಸಮಾಜದ ಋಣವನ್ನು ತೀರಿಸುವದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ದುಡಿಮೆಯಲ್ಲಿನ ಸ್ವಲ್ಪ ಹಣವನ್ನು ಸಮಾಜ ಹಾಗೂ ಶಿಕ್ಷಣಕ್ಕೆ ಮೀಸಲಿಡಬೇಕು. ಇದರಿಂದ ಮಕ್ಕಳ ಕಲಿಕೆಗೆ ಸಹಕಾರಿಯಾಗುತ್ತದೆ ಎಂದರು.

ಪತ್ರಕರ್ತ ಹನಮೇಶ ಯಾವಗಲ್ಲ ಮಾತನಾಡಿ, ಪ್ರತಿಬಿಂಬ ಟ್ರಸ್ಟ್ ಸರಕಾರಿ ಶಾಲಾಭಿವೃದ್ಧಿಗಾಗಿ ಮಕ್ಕಳ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಬೇಕು ಎಂಬ ಉದ್ದೇಶದಿಂದ ನೂರಕ್ಕೂ ಹೆಚ್ಚು ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್ ಸೌಲಭ್ಯ ನೀಡಿದ್ದು, ಮುಳಗುಂದ ಪ್ರತಿಶಾಲೆಗಳಿಗೂ ಹಂತ ಹಂತವಾಗಿ ನೀಡುತ್ತೇವೆ ಎಂದರು.

ಶಿವಾನಂದ ದಳವೆ, ಸುರೇಂದ್ರ ದೇಶಪಾಂಡೆ, ಪ್ರಲ್ಹಾದ ಇನಾಮದಾರ, ಶಾಲಾ ಪ್ರಧಾನ ಗುರು ಸಂಗಮೇಶ ತಮ್ಮನಗೌಡರ, ಪಿ.ಎಸ್. ಮರಿದೇವರಮಠ, ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕಣವಿ, ಪ.ಪಂ ಸದಸ್ಯ ಎಸ್.ಸಿ. ಬಡ್ನಿ, ವಿಜಯ ನೀಲಗುಂದ, ಮಾಹಾಂತೇಶ ಕೆಂಚನಾಯ್ಕರ್, ಎಸ್.ಪಿ. ಸರ್ವದೆ, ಶುಭಾ ಪಾಟೀಲ್, ಆರ್.ಎಂ. ರೋಣದ, ಕೆ.ಎಸ್. ಗಾಣಿಗೇರ, ಬಸಮ್ಮಾ ಲದ್ದಿ, ಎಸ್‌ಡಿಎಂಸಿ ಸರ್ವ ಸದಸ್ಯರು ಇದ್ದರು.

# ನೂತನ ರಥದ ಪುರಪ್ರವೇಶ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಕಳಸಾಪೂರ ರಸ್ತೆಗೆ ಹೊಂದಿಕೊಂಡಿರುವ ನಂಜನಗೂಡು ಮಂತ್ರಾಲಯ ಶಾಖಾಮಠದ ಕಟ್ಟಡ ಈಗಾಗಲೇ ಪೂರ್ಣಹಂತಕ್ಕೆ ತಲುಪಿದ್ದು, ಶ್ರೀಶ್ರೀಶ್ರೀ ಸುಭುದೇಂದ್ರ ತೀರ್ಥರ ಶ್ರೀಗಳ ಅನುಗ್ರಹದಂತೆ ಅತೀ ಶೀಘ್ರದಲ್ಲಿ ಲೋಕಾರ್ಪಣೆಗೊಳ್ಳಲಿದೆ.

ಶ್ರೀ ಮಠದ ಕಟ್ಟಡದಲ್ಲಿ ಹಲವಾರು ಭಕ್ತರು, ದಾನಿಗಳು ಸಕ್ರೀಯವಾಗಿ ತಮ್ಮ ಸೇವೆಯನ್ನು ಸಲ್ಲಿಸಿದ್ದಾರೆ. ಗರ್ಭಗುಡಿ, ಪ್ರಾಂಗಣ, ಮೊದಲನೇ ಅಂತಸ್ತು ಹಾಗೂ ಪಾಕಶಾಲೆ, ಶ್ರೀಗಳ ವಿಶ್ರಾಂತಿ ಗೃಹಗಳು ಎಲ್ಲವೂ ಶ್ರೀಗಳ ಆಶಯದಂತೆ, ವಾಸ್ತುಶಾಸ್ತ್ರದಂತೆ ನಿರ್ಮಾಣವಾಗಿದೆ. ಕೃಷ್ಣಶಿಲೆಯಲ್ಲಿ ಬೃಂದಾವನ, ಪ್ರಾಣದೇವರು, ಬೃಂದಾವನದ ಮುಂದೆ ಗಜಶಿಲ್ಪಗಳು ನಿರ್ಮಾಣವಾಗಿವೆ. ಪೂಜೆಗೆ ಅವಶ್ಯಕವಾಗಿರುವ ಪ್ರಲ್ಹಾದ ರಾಜರ ರಜತ ಉತ್ಸವ ಮೂರ್ತಿ, ಬೃಂದಾವನದ ರಜತ ಕವಚ, ಶ್ರೀ ರಾಘವೇಂದ್ರ ಸ್ವಾಮಿಗಳ ರಜತ ಮೂರ್ತಿ ಮತ್ತು ಪ್ರಾಣದೇವರ ರಜತ ಪ್ರಭಾವಳಿ ಹಾಗೂ ರಜತ ಪಾದುಕೆಗಳು, ಅಲ್ಲದೇ ದೊಡ್ಡ ಕಂಚಿನ ಗಂಟೆ, ಪಲ್ಲಕ್ಕಿ ಹಲವಾರು ಪೂಜಾ ಸಾಮಗ್ರಿಗಳನ್ನು ಭಕ್ತರು ಭಕ್ತಿ ಕಾಣಿಕೆಯಾಗಿ ಸಲ್ಲಿಸಿದ್ದಾರೆ.

ರಥಶಿಲ್ಪಿಯಾದ ಶ್ರೀ ಕಾಳಾಚಾರಿ ಸಹೋದರರು ಕಲಾತ್ಮಕವಾದ ಒಳಾಂಗಣ ರಥ ನಿರ್ಮಿಸಿದ್ದು, ಸದರ ರಥವನ್ನು ಬೆಟಗೇರಿಯ ಭಾಗದಲ್ಲಿ ಪುರಪ್ರವೇಶದ ಸಂದರ್ಭದಲ್ಲಿ ಹಲವಾರು ಭಕ್ತರು ಸೇರಿ ಪೂಜೆ ಸಲ್ಲಿಸಿದರು.

ಆಗಮಿಸುವ ಭಕ್ತರಿಗೆ ಹಲವಾರು ಮೂಲಭೂತ ಸೌಕರ್ಯಗಳನ್ನು ನೀಡುವ ಸದಿಚ್ಛೆಯಿದ್ದು, ಸೇವೆ ಸಲ್ಲಿಸಲು ಭಕ್ತರು ರಾಘವೇಂದ್ರ ಮಠದ ಎಸ್.ಬಿ.ಐ. ಬ್ಯಾಂಕ್ ಖಾತೆ ನಂ. 32608728239 ಈ ಖಾತೆಗೆ ಹಣ ಜಮಾ ಮಾಡಬಹುದು ಹಾಗೂ ಇತರೆ ಮಾಹಿತಿಗಾಗಿ ಕಟ್ಟಡದ ಸಮಿತಿಯ ಕಾರ್ಯದರ್ಶಿ ಗುರುರಾಜ ಹೆಬಸೂರ (9686365213) ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಮಕ್ಕಳ ಭವಿಷ್ಯಕ್ಕೆ ಉತ್ತಮ ಶಿಕ್ಷಣ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ದುಡ್ಡಿಗಾಗಿ ಹತ್ತು ಶಿಕ್ಷಣ ಸಂಸ್ಥೆಗಳನ್ನು ಕಟ್ಟುವದಕ್ಕಿಂತ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಉತ್ತಮ ಶಿಕ್ಷಣಕ್ಕಾಗಿ ಒಂದು ಶಾಲೆಯನ್ನು ಕಟ್ಟಿದರೆ ಸಾಕು, ಅದು ಸಮಾಜದ ಋಣ ತೀರಿಸಿದಂತಾಗುತ್ತದೆ ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ನೂತನ ಜಿಲ್ಲಾಧ್ಯಕ್ಷ ಹಾಗೂ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ಹಿರಿಯ ಮಾರ್ಗದರ್ಶಕ ರಾಜಣ್ಣ ಗುಡಿಮನಿ ಹೇಳಿದರು.

ನಗರದ ಗಂಗಾಪೂರಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಂಸ್ಥೆಯಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾದ ನೂತನ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಅವರು ಸನ್ಮಾನ



ಸ್ವೀಕರಿಸಿ ಮಾತನಾಡಿದರು.

ಇಂದಿನ ದಿನಗಳಲ್ಲಿ ಮಕ್ಕಳಿಗೆ ಭವಿಷ್ಯದ ಕುರಿತು ಮೌಲ್ಯಯುತ ಶಿಕ್ಷಣ, ಸಂಸ್ಕಾರದ ಬಗ್ಗೆ ತಿಳಿ ಹೇಳಬೇಕಾದ ಅನಿವಾರ್ಯತೆಯಿದೆ. ಶಿಕ್ಷಣ ಎಂದರೆ ಬರಿಯ ಅಂಕಗಳನ್ನು ಗಳಿಸುವದು ಎಂದೇನಿಲ್ಲ. ತಂದೆ-ತಾಯಿ, ಗುರು-ಹಿರಿಯರಿಗೆ ಗೌರವ ಕೊಡುವದು, ಇನ್ನೊಬ್ಬರಿಗೆ ಸಹಾಯ ಮಾಡುವುದು ಸೇರಿದಂತೆ ಒಳ್ಳೆಯ ಗುಣಗಳನ್ನು ಅಳವಡಿಸಿಕೊಳ್ಳುವದಾಗಿದೆ ಎಂದು ಹೇಳಿದ ಅವರು, ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯಲ್ಲಿ ಕಲಿತ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ, ಹೆತ್ತ ತಂದೆ-ತಾಯಿಗಳಿಗೆ, ಕಲಿಸಿದ ಶಿಕ್ಷಕರಿಗೆ ಹಾಗೂ ಕಲಿತ ಶಾಲೆಗೆ ಕೀರ್ತಿ ತರುವ ಕೆಲಸವನ್ನು ಮಾಡಬೇಕೆಂದು ಹೇಳಿದರು.

ಇದೇ ಸಂದರ್ಭದಲ್ಲಿ ಶ್ರೀ ದುಗಾದೇವಿ ಶಿಕ್ಷಣ ಸಮಿತಿಯ ನಿರ್ದೇಶಕರಾದ ಮೋಹನ ಇಮರಾಪೂರ, ಸಲಹಾ ಸಮಿತಿಯ ಸದಸ್ಯರುಗಳಾದ ಲೋಕೇಶ ಮಲ್ಲಿಗವಾಡ, ಮುತ್ತು ಜಡಿ, ಶಿಕ್ಷಕಿಯರಾದ ಮಂಜುಳಾ ಹಿಡ್ಕಿಮಠ, ಸುಧಾ ತಿರಕಣ್ಣವರ, ವಿ.ವಿ. ಕಲ್ಮನಿ, ಮಂಜುಳಾ ದಾಸರ ಸಿಬ್ಬಂದಿಗಳಾದ ಲಕ್ಷ್ಮೀ ಕಮಡೊಳ್ಳಿ, ಸೈನಾಜಬಾನು ರೋಣ ಮುಂತಾದವರು ಉಪಸ್ಥಿತರಿದ್ದರು.

# ಆಕರ್ಷಕ ಪಥಸಂಚಲನ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದಲ್ಲಿ ದೇಶಭಕ್ತಿ ಹಾಗೂ ಹಿಂದೂ ಜಾಗೃತಿಗಾಗಿ ಶ್ರೀ ರಾಮ ಸೇನೆಯ ವತಿಯಿಂದ ಅ.27ರಂದು ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಕರ್ಷಕ ಪಥಸಂಚಲನ ಏರ್ಪಡಿಸಲಾಗಿದೆ.

ಮಧ್ಯಾಹ್ನ 4 ಗಂಟೆಗೆ ವೀರನಾರಾಯಣ ದೇವಸ್ಥಾನದಿಂದ ಪಥಸಂಚಲನ ಪ್ರಾರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಕೊನೆಗೊಂಡು ಸಮಾರಂಭ ಜರುಗುವದು.

ಕಾರಣ, ಗದುಗಿನ ಸಮಸ್ತ ಹಿಂದೂ ಬಾಂಧವರು, ಹಿಂದೂ ಸಂಘಟನೆಗಳ ಕಾರ್ಯಕರ್ತರು ಪಥಸಂಚಲನದಲ್ಲಿ ಪಾಲ್ಗೊಳಬೇಕೆಂದು ಪ್ರಕಟಣೆ ವಿನಂತಿಸಿದೆ.

## ನಿಧನ ವಾರ್ತೆ

### ಸರೋಜಿನಿ ಈಶ್ವರಪ್ಪ ಗಡ್ಡಿ



ಬೆಟಗೇರಿ: ಗದಗ-ಬೆಟಗೇರಿ ಜವಳಿ ಉತ್ಪಾದಕರ ಸಂಘದ ಅಧ್ಯಕ್ಷರು ಹಾಗೂ ಗಣ್ಯ ಜವಳಿ ಉತ್ಪಾದಕರಾದ ಅನಿಲ ಗಡ್ಡಿಯವರ ಮಾತೋಶ್ರೀ ಶ್ರೀಮತಿ ಸರೋಜಿನಿ ಈಶ್ವರಪ್ಪ ಗಡ್ಡಿ (84) ಅವರು ಶನಿವಾರ ನಿಧನರಾದರು.

ಮೃತರ ಅಂತಿಮಯಾತ್ರೆ ರವಿವಾರ ಬೆಳಿಗ್ಗೆ 10.30 ಗಂಟೆಗೆ ಬೆಟಗೇರಿಯಲ್ಲಿರುವ ಟರ್ನಲ್ ಪೇಟೆಯ ಸುಭಾಶ ರಸ್ತೆಯಲ್ಲಿರುವ ಅವರ ಸ್ವಗ್ರಹದಿಂದ ಹೊರಡಲಿದೆ. ಶ್ರೀಮತಿ ಸರೋಜಿನಿ ಈಶ್ವರಪ್ಪ ಗಡ್ಡಿ ಅವರ ನಿಧನಕ್ಕೆ ನಗರಸಭೆಯ ಮಾಜಿ ಅಧ್ಯಕ್ಷ, ಗಣ್ಯ ಉದ್ಯಮಿ ಶಿವಪ್ಪ ಮುಳಗುಂದ, ನಗರಸಭೆಯ ಮಾಜಿ ಅಧ್ಯಕ್ಷೆ ನಾಗರತ್ನ ಶಿವಪ್ಪ ಮುಳಗುಂದ, ಸದಸ್ಯರಾದ ಶಕುಂತಲಾ ಹೊಳೆಬಸಪ್ಪ ಅಕ್ಕಿ, ವಿಜಯ ಕಬಾಡಿ, ಅಮರೇಶ ಚ್ಯಾಗಿ, ಎಮ್.ಎಸ್. ಮುಳಗುಂದ, ಶಂಕರ ಮುಳಗುಂದ, ಸಾಮಾಜಿಕ ಕಾರ್ಯಕರ್ತ ಹೊಳೆಬಸಪ್ಪ ಅಕ್ಕಿ ಸೇರಿದಂತೆ ಗಣ್ಯರು ಸಂತಾಪ ಸೂಚಿಸಿದ್ದಾರೆ.

**ಕಾಂಗ್ರೆಸ್ ನ ದುರಾಡಳಿತ ಮತ್ತು ದೌರ್ಜನಕ್ಕೆ ಜನರು ತಕ್ಕ ಉತ್ತರ ಕೊಡುತ್ತಾರೆ: ಬಸವರಾಜ ಬೊಮ್ಮಾಯಿ**

# ಗ್ಯಾರಂಟಿಗಳು ಕೈ ಹಿಡಿಯಲ್ಲ



**■ವಿಜಯಸಾಕ್ಷಿ ಸುದ್ದಿ, ಶಿಗ್ಗಾವಿ**

ಕಳೆದ ಒಂದೂವರೆ ವರ್ಷದ ಕಾಂಗ್ರೆಸ್ ನ ದುರಾಡಳಿತ ಮತ್ತು ದೌರ್ಜನಕ್ಕೆ ಈ ಉಪ ಚುನಾವಣೆಯಲ್ಲಿ ಜನರು ತಕ್ಕ ಉತ್ತರ ಕೊಡುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಶಿಗ್ಗಾವಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಗ್ಯಾರಂಟಿಗಳು ಕೈ ಹಿಡಿಯುತ್ತವೆ ಎಂದು ಕಾಂಗ್ರೆಸ್ ನವರು ಕನಸು ಕಾಣುತ್ತಿದ್ದಾರೆ. ಅವರ ಕನಸು ನನಸಾಗುವುದಿಲ್ಲ. ಕಳೆದ ಲೋಕಸಭೆ ಚುನಾವಣೆಯಲ್ಲಿ ನಾನು ಹಾವೇರಿ-ಗದಗ ಜಿಲ್ಲೆಯ ಕಡೆಗೆ ಹೆಚ್ಚಿನ ಗಮನ ಹರಿಸಿದ್ದೆ, ಆಗ ಸ್ವಲ್ಪ ವ್ಯತ್ಯಾಸ ಆಗಿದೆ. ಆದರೆ, ನಮ್ಮ ಕಾರ್ಯಕರ್ತರಿಗೆ ಈಗಾಗಲೇ ಅದರ ಅರಿವಾಗಿದೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಯಾವ ರೀತಿ ಜನರು ಬೆಂಬಲ ಕೊಟ್ಟಿದ್ದರೋ ಅದೇ ರೀತಿ ಈಗ ಜನ ಬೆಂಬಲ ಸಿಗಲಿದೆ. ನಮ್ಮ ಕಾರ್ಯಕರ್ತರು ಎಲ್ಲ ರೀತಿಯ ಸಿದ್ದತೆ ಮಾಡಿಕೊಂಡಿದ್ದಾರೆ ಎಂದರು.

ಕಾಂಗ್ರೆಸ್ ನವರು ರೌಡಿ ಶೀಟರ್‌ಗೆ ಟಿಕೆಟ್ ಕೊಟ್ಟಿದ್ದಾರೆ ಎಂದು ಕಾಂಗ್ರೆಸ್‌ನವರೇ ಆರೋಪ ಮಾಡಿದ್ದಾರೆ. ಈ ಬಗ್ಗೆ ಕಾಂಗ್ರೆಸ್ ನಾಯಕರು ಸ್ಪಷ್ಟೀಕರಣ ನೀಡಬೇಕು ಎಂದರು.

ಸಚಿವ ಜಮೀರ್ ಅಹಮದ್ ಅವರ ಸವಾಲು ಕುರಿತು ಕೇಳಿದ ಪ್ರಶ್ನೆಗೆ ಅವರ ಸವಾಲು ಹಾಸ್ಯಾಸ್ಪದವಾಗಿದ್ದು, ಸತ್ಯಕ್ಕೆ ದೂರವಾಗಿದೆ ಎಂದರು. ಶಿಗ್ಗಾವಿ ಕ್ಷೇತ್ರದಲ್ಲಿ ಜಾತಿ ಲೆಕ್ಕಾಚಾರ ನಡೆಯುತ್ತಿರುವ ಕುರಿತು ಕೇಳಿದ ಪ್ರಶ್ನೆಗೆ ನಾವೆಲ್ಲರೂ ಒಕ್ಕಟ್ಟಾಗಿದ್ದೇವೆ. ಎಲ್ಲ ಸಮುದಾಯದವರು ನಮಗೆ ಬೆಂಬಲ ಸೂಚಿಸಿದ್ದಾರೆ. ಈ ಚುನಾಚಣೆಯಲ್ಲಿ ನನಗಿಂತ ಹೆಚ್ಚು ಬೆಂಬಲ ಭರತ್ ಬೊಮ್ಮಾಯಿಗೆ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ಬಸವೇಶ್ವರ ಮಹಾವಿದ್ಯಾಲಯದಲ್ಲಿ ಲಿಂ. ಪೂಜ್ಯ ತೋಂಟದ ಸಿದ್ಧಲಿಂಗ ಶ್ರೀಗಳ ಪುಣ್ಯಸ್ಮರಣೋತ್ಸವ**

# ಸಾಮಾಜಿಕ ನ್ಯಾಯದ ಆದರ್ಶಗಳನ್ನು ಪಾಲಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಯುವ ಪೀಳಿಗೆ ಪೂಜ್ಯ ಸಿದ್ಧಲಿಂಗ ಶ್ರೀಗಳ ಸಮಾನತೆ, ಸ್ವಾತಂತ್ರ್ಯ ಹಾಗೂ ಸಾಮಾಜಿಕ ನ್ಯಾಯದ ಆದರ್ಶಗಳನ್ನು ಪಾಲಿಸಿ, ಮೌಲ್ಯಯುತ ಗುಣ ಮತ್ತು ಉತ್ತಮ ನಡುವಳಿಕೆಗಳನ್ನು ಬೆಳೆಸಿಕೊಂಡು ಸಮಾಜದ ಆಸ್ತಿಯಾಗಿ ಮತ್ತೊಬ್ಬರಿಗೆ ಪ್ರೇರಣೆಯಾಗಬೇಕೆಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ ಕಿವಿಮಾತು ಹೇಳಿದರು.

ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪೂಜ್ಯ ಲಿಂ. ಸಿದ್ಧಲಿಂಗ ಶ್ರೀಗಳ 6ನೇ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಎಸ್.ಎನ್. ಬಳ್ಳಾರಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಇತಿಹಾಸ ಮರೆತವರು ಇತಿಹಾಸ ಬರೆಯಲಾರರು ಎಂಬಂತೆ ಪೂಜ್ಯ ಲಿಂ. ಸಿದ್ಧಲಿಂಗ ಶ್ರೀಗಳ ಸಮಾನತೆಯ ಅಂತಃಕರಣವನ್ನು




ಅರಿತುಕೊಳ್ಳಲು ಪ್ರತಿಯೊಬ್ಬರೂ ಪೂಜ್ಯರ ಜೀವನ ಸಾಧನೆಗಳ ಇತಿಹಾಸವನ್ನು ಓದಬೇಕು. ಏಕೆಂದರೆ ಪೂಜ್ಯರು ಸಮಾತೆಯ ಹರಿಕಾರರಾಗಿದ್ದರು. ಒಂದು ಕಾಲಘಟ್ಟದಲ್ಲಿ ಕೆಳವರ್ಗದವರನ್ನು ಸಾಮಾಜಿಕ ಅನ್ಯಾಯಕ್ಕೆ ಒಳಪಡಿಸಿ ಎಲ್ಲ ಅವಕಾಶಗಳಿಂದ ವಂಚಿತರನ್ನಾಗಿಸಿದ್ದರು. ಅಂತಹ ಸಂದರ್ಭದಲ್ಲಿ ಶೋಷಿತರ ಆಶಾ ಕಿರಣವಾಗಿ ಬಸವಾದಿ ಶರಣರು

ಬಸವಾದಿ ಶರಣರ ಆದರ್ಶಗಳ ಸಾಕಾರ ಮೂರ್ತಿಯಾಗಿದ್ದ ಸಿದ್ಧಲಿಂಗ ಶ್ರೀಗಳು ಸರಳ ಮತ್ತು ಸಮಾಜಮುಖಿ ಜೀವನ ನಡೆಸಿ ಸರ್ವ ಧರ್ಮಿಯರನ್ನು ಪ್ರೀತಿಯಿಂದ ಕಂಡು ಭಾವೈಕ್ಯತೆಯ ಹರಿಕಾರರಾಗಿದ್ದರು. ವಿದ್ಯಾರ್ಥಿಗಳು ಪೂಜ್ಯರ ಆದರ್ಶಗಳನ್ನು ಅಳವಡಿಸಿಕೊಂಡು ಸ್ಪರ್ಧಾತ್ಮಕ ವಿಷಯಗಳಲ್ಲಿ ಭಾಗವಹಿಸಿ ಉತ್ತಮ ಫಲಿತಾಂಶ ಮತ್ತು ವ್ಯಕ್ತಿತ್ವ ಹೊಂದಬೇಕೆಂದು ಎಸ್. ಎಸ್. ಪಟ್ಟಣಶೆಟ್ಟರ ಹೇಳಿದರು.

ಸಕಲರಿಗೂ ಲೇಸನ್ನೇ ಬಯಸಿ ಸಮಾನತೆಯ ಸಮಾಜವನ್ನು ನಿರ್ಮಿಸಿದರು.

ಅದೇ ಹಾದಿಯಲ್ಲಿ ನಡೆದ ಅಂಬೇಡ್ಕರ ಅವರು ಸಂವಿಧಾನ ನಿರ್ಮಿಸಿ ಶೋಷಿತರ ಧ್ವನಿಯಾದರು. ಹೀಗೆ ಬಸವ, ಬುದ್ಧ, ಅಂಬೇಡ್ಕರರ ಆದರ್ಶಗಳನ್ನು ಪಾಲಿಸಿ ಗುರು ಪರಂಪರೆಗೆ ಶ್ರೇಷ್ಠತೆ ತಂದುಕೊಟ್ಟ ಸಿದ್ಧಲಿಂಗ ಶ್ರೀಗಳು ಅಂತಹ ಮಹನೀಯರ ಸಾಲಿಗೆ ಸೇರಿದವರೆಂದು ಶ್ಲಾಘಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್. ಎಸ್. ಪಟ್ಟಣಶೆಟ್ಟರ ಮಾತನಾಡಿ, ಬಸವಣ್ಣನವರು ಸಮಾನತೆಯಿಲ್ಲದ ಸಂಪ್ರದಾಯ ಮತ್ತು ಧರ್ಮ ಬೇಡವೆಂದು ತಿರಸ್ಕರಿಸಿ ಸಮಾನತೆಯ ಹೊಸ ಸಮಾಜದ ನಿರ್ಮಾಣದ ಕನಸು ಕಂಡು ಸಾಕಾರಗೊಳಿಸಿದರು ಎಂದರು.

ವೇದಿಕೆಯ ಮೇಲೆ ಸ್ಥಾನಿಕ ಆಡಳಿತ ಮಂಡಳಿಯ ಸದಸ್ಯರಾದ ಶೆಖಣ್ಣ ಕಳಸಾಪೂರಶೆಟ್ಟರ, ಮೋಹನ ಆಲಮೇಲಕರ, ವಿದ್ಯಾಧರ ದೊಡ್ಡಮನಿ, ಬಲರಾಮ ಬಸವಾ, ಸಿದ್ಧಲಿಂಗಯ್ಯ ಹಿರೇಮಠ ಉಪಸ್ಥಿತರಿದ್ದರು.

ರೂಪಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಪ್ರಾಚಾರ್ಯ ಎಂ.ಎಂ. ಬುರಡಿಯವರು ಸ್ವಾಗತಿಸಿ ಪರಿಚಯಿಸಿದರು. ಪ್ರೊ. ಕೆ.ವಿ ಬಾಗಲಕೋಟಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

**ವಾಂತಿ ಬೇಧಿ ಪ್ರಕರಣ; ಜಿಲ್ಲಾಧಿಕಾರಿ, ಜಿ.ಪಂ ಸಿಇಓ, ಎಸ್.ಪಿ ಅವರಿಂದ ಮುತಗಿ ಗ್ರಾಮ ಭೇಟಿ**

# ನಿಷ್ಕಾಳಜಿ ತೋರಿದ ಪಿಡಿಓ ಅಮಾನತು

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಧಾರವಾಡ ಜಿಲ್ಲೆಯ ಕಲಘಟಗಿ ತಾಲೂಕಿನ ಮುತಗಿ ಗ್ರಾಮದ ಒಂದು ಬೋರ್‌ವೇಲ್‌ನಿಂದ ಕಲುಷಿತ ನೀರು ಗ್ರಾಮದ ಮೂರು ಓಣಿಗಳಿಗೆ ಸರಬರಾಜು ಆಗಿರುವದರಿಂದ ಅಲ್ಲಿನ ನಿವಾಸಿಗಳಲ್ಲಿ ವಾಂತಿ ಬೇಧಿ ಉಂಟಾಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.



ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ ಮತ್ತು ಜಿಲ್ಲಾ ಪೊಲೀಸ್ ಅಧೀಕ್ಷಕ ಗೋಪಾಲ ಬ್ಯಾಕೋಡ ಅವರು ಮುತಗಿ ಗ್ರಾಮ, ಕಲಘಟಗಿ ತಾಲೂಕು ಆಸ್ಪತ್ರೆ ಹಾಗೂ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಸಾರ್ವಜನಿಕರ ಆರೋಗ್ಯ ವಿಚಾರಿಸಿದರು.

ಸಿಇಓ ಅವರು ನೀರು ಸರಬರಾಜು ಮಾಡುವ ಬೋರ್‌ವೇಲ್ ಸ್ಥಳ, ಓಎಚ್‌ಟಿ ಮತ್ತು ಮುತಗಿ ಗ್ರಾಮದಲ್ಲಿನ ಆರೋಗ್ಯ ಕ್ಷೇಮ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಚಿಕಿತ್ಸೆ ಪಡೆಯುತ್ತಿರುವ ರೋಗಿಗಳನ್ನು ವಿಚಾರಿಸಿದರು.

ಮುತಗಿ ಗ್ರಾಮದಲ್ಲಿ ತೆರೆದಿರುವ ತಾತ್ಕಾಲಿಕ ಆಸ್ಪತ್ರೆಗೆ ಭೇಟಿ ನೀಡಿ, ಚಿಕಿತ್ಸೆಗೆ ಬಂದಿರುವ ಮತ್ತು ಅಲ್ಲಿಯೇ ದಾಖಲಾಗಿ ಚಿಕಿತ್ಸೆ ಪಡೆಯುತ್ತಿರುವ ಗ್ರಾಮಸ್ಥರನ್ನು ಮಾತನಾಡಿಸಿ, ಆರೋಗ್ಯ ವಿಚಾರಿಸಿದರು. ಚಿಕಿತ್ಸೆ, ಔಷಧಿ ಸಕಾಲಕ್ಕೆ ಮತ್ತು ಉತ್ತಮ ರೀತಿಯಲ್ಲಿ ದೊರೆಯುತ್ತಿರುವ ಬಗ್ಗೆ ಮಾಹಿತಿ ಪಡೆದರು.

ನಂತರ ಜಿಲ್ಲಾಧಿಕಾರಿಗಳು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಕಲಘಟಗಿ ತಾಲೂಕಿನ ವ್ಯಾಪ್ತಿಯ ಮುತ್ತಗಿ ಗ್ರಾಮದಲ್ಲಿ ಅಕ್ಟೋಬರ್ 23ರಂದು 10 ಪ್ರಕರಣಗಳು, ಅ. 24ರಂದು 27 ವಾಂತಿ ಬೇಧಿ ಪ್ರಕರಣಗಳು ವರದಿಯಾಗಿದ್ದು, ಇಲ್ಲಿಯವರಿಗೆ ಒಟ್ಟು 46 ಪ್ರಕರಣಗಳು ವರದಿಯಾಗಿವೆ. ಈ ಪೈಕಿ ಪ್ರಕರಣಗಳಲ್ಲಿ ತೀವ್ರ ಸ್ವರೂಪದ 10 ರೋಗಿಗಳು ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ವಾಂತಿ ಬೇಧಿ ಪ್ರಕರಣಗಳು ವರದಿಯಾದ ತಕ್ಷಣ ಗ್ರಾಮದಲ್ಲಿ ತುರ್ತುಚಿಕಿತ್ಸಾ ಘಟಕವನ್ನು ಪ್ರಾರಂಭಿಸಲಾಗಿದೆ. ಸದರಿ ಘಟಕಕ್ಕೆ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯವರನ್ನು ನಿಯೋಜಿಸಿ ಅವಶ್ಯಕ ಔಷಧಿಗಳನ್ನು ಒದಗಿಸಲಾಗಿದೆ ಎಂದು ತಿಳಿಸಿದರು.

ಅಕ್ಟೋಬರ್ 21ರಂದು ವಿಪರೀತ ಮಳೆ ಬಿದ್ದ ಕಾರಣ ಕಲುಷಿತ ನೀರು ಕುಡಿಯುವ ನೀರಿಗೆ ಸೇರ್ಪಡೆಗೊಂಡಿದೆ. ಕುಡಿಯುವ ನೀರಿನ ಬೋರ್‌ವೆಲ್‌ನಲ್ಲಿ ಕಲುಷಿತ ನೀರು ಸೇರ್ಪಡೆಗೊಂಡಿರುವದರಿಂದ ಹಾಗೂ ಓವರ್ ಹೆಡ್ ಟ್ಯಾಂಕ್ ಮೂಲಕ ಸರಬರಾಜು ಆಗುವ ನೀರಿನ್ನು ಕ್ಲೋರಿನೇಷನ್ ಮಾಡದೇ ಸರಬರಾಜು ಮಾಡಿರುವದರಿಂದ ಮುತಗಿ ಗ್ರಾಮದಲ್ಲಿ ವಾಂತಿ ಬೇಧಿ ಪ್ರಕರಣಗಳು ವರದಿಯಾಗಿರುವುದಾಗಿ ಪ್ರಾಥಮಿಕ ಹಂತದ ಪರಿಶೀಲನೆಯಲ್ಲಿ ತಿಳಿದು ಬಂದಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.



ಶುದ್ಧವಾದ ಕುಡಿಯುವ ನೀರನ್ನು ಗ್ರಾಮ ಪಂಚಾಯತಿಯಿಂದ ಸರಬರಾಜು ಮಾಡದೇ ಇರುವುದರಿಂದ ಕಲುಷಿತ ನೀರನ್ನು ಸೇವಿಸಿ, 44ಕ್ಕೂ ಹೆಚ್ಚು ಗ್ರಾಮಸ್ಥರು ವಾಂತಿ-ಬೇಧಿಯಿಂದ ಕಲಘಟಗಿ ತಾಲ್ಲೂಕು ಆಸ್ಪತ್ರೆಗೆ ಹಾಗೂ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಈ ಹಿನ್ನಲೆಯಲ್ಲಿ ಮುಂಜಾಗ್ರತೆ ಕ್ರಮ ವಹಿಸದೇ ಇರುವ ಕಾರಣ ಮತ್ತು ಕರ್ತವ್ಯದಲ್ಲಿ ನಿರ್ಲಕ್ಷತೆ ವಹಿಸಿದ್ದರಿಂದ ಪಿಡಿಓ ಪ್ರವೀಣಕುಮಾರ ಗಣಿ ಅವರನ್ನು ಅಮಾನತ್ತುಗೊಳಿಸಿ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಅವರು ಆದೇಶ ಹೊರಡಿಸಿದ್ದಾರೆ.

# ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗದುಗಿನ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ಶನಿವಾರ ನಡೆದ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಶಿಗ್ಲಿ ಗ್ರಾಮದ ಗ್ರಾಮಭಾರತಿ ಶಿಕ್ಷಣ ಸಮಿತಿಯ ಎಸ್.ಎಸ್. ಕೂಡ್ಲಮಠ ಪ್ರೌಢಶಾಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳಾದ ಲಕ್ಷ್ಮೀ ಬಾಳಿಕಾಯಿ ಸರಪಳಿ ಗುಂಡು ಎಸೆತದಲ್ಲಿ ಪ್ರಥಮ, ಮಂಜುನಾಥ ಹಳೆರಿತ್ತಿ ಬಾಲಕರ ವಿಭಾಗದ ಸರಪಳಿ ಗುಂಡು ಎಸೆತದಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿ ಕೀರ್ತಿ ತಂದಿದ್ದಾರೆ.

ರಾಜ್ಯಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆ ಹಾಗೂ ತರಬೇತಿ ನೀಡಿದ ಕೆ.ಆರ್. ಲಮಾಣಿ ಇವರಿಗೆ ಸಂಸ್ಥೆಯ ಚೇರಮನ್ ಎಸ್.ಪಿ. ಬಳಿಗ್ಧರ, ಕಾರ್ಯದರ್ಶಿ ಸಿ.ಎಂ. ರಾಗಿ, ಮುಖ್ಯೋಪಾಧ್ಯಾಯ ಸಿ.ಬಿ. ಮೊಗಲಿ, ಸಂಸ್ಥೆಯ ಸರ್ವ ಸದಸ್ಯರು, ಪದಾಧಿಕಾರಿಗಳು, ಶಾಲೆಯ ಶಿಕ್ಷಕ ವೃಂದ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.


## ರಾಜ್ಯದಲ್ಲಿ ಈವರೆಗೆ 25 ಜನರು ಮಳೆಯಿಂದ ಮೃತಪಟ್ಟಿದ್ದಾರೆ: ಸಿಎಂ ಸಿದ್ದರಾಮಯ್ಯ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ರಾಜ್ಯದಲ್ಲಿ ಈವರೆಗೆ 25 ಜನರು ಮಳೆಯಿಂದ ಮೃತಪಟ್ಟಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಗೃಹಕಚೇರಿ ಕೃಷ್ಣಾದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಳೆ ಹಾನಿ ಬಗ್ಗೆ ಡಿಸಿ, ಸಿಇಓಗಳು, ಎಸ್ಪಿಗಳ ಸಭೆ ಮಾಡಿದ್ದೇನೆ. ಬೆಂಗಳೂರು ಸೇರಿ ಹಲವೆಡೆ ಹಿಂಗಾರು ಮಳೆಯಿಂದ ಹಾನಿಯಾಗಿದೆ. ಅಕ್ಟೋಬರ್ 1ರಿಂದ 25ರವರೆಗೆ 181 ಮೀ.ಮೀ ಅಂದರೆ ಅತೀ ಹೆಚ್ಚು ಮಳೆಯಾಗಿದೆ ಎಂದಿದ್ದಾರೆ.

ಈ ಅವಧಿಯಲ್ಲಿ ಮಳೆಯಿಂದಾಗಿ 84 ಮನೆಗಳು ಸಂಪೂರ್ಣ ಹಾನಿಯಾಗಿದ್ದು, ರಾಜ್ಯದ ಹಲವೆಡೆ 2,074 ಮನೆಗಳು ಭಾಗಶಃ ಹಾನಿಗೀಡಾಗಿವೆ. ಪೂರ್ತಿ ಮನೆ ಹಾನಿಗೆ 1.20 ಲಕ್ಷ ರೂ. ಪರಿಹಾರ ನೀಡಬೇಕು. ಸಣ್ಣಪುಟ್ಟ ಹಾನಿಯಾದರೆ 50 ಸಾವಿರ ರೂ. ಪರಿಹಾರ ಕೊಡುತ್ತೇವೆ. ಈ ಪರಿಹಾರ ನವೆಂಬರ್, ಅಕ್ಟೋಬರ್ ತಿಂಗಳಲ್ಲೂ ಅನ್ವಯ ಆಗಲಿದೆ. ಜತೆಗೆ ಮನೆ ನಿರ್ಮಾಣ ಮಾಡಲು ಈಗಾಗಲೇ ಆದೇಶಿಸಲಾಗಿದೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.



ಗದಗ ನಗರದ ರಾಜೀವಗಾಂಧಿ ಬಡಾವಣೆಯ ಪೊಲೀಸ್ ಠಾಣೆಗೆ ನೂತನ ಪಿಎಸ್‌ಐ ಆಗಿ ಬಡ್ತಿ ಹೊಂದಿ ಕಾರ್ಯನಿರ್ವಹಿಸುತ್ತಿರುವ ಮಾರುತಿ ಜೋಗದಂಡಕರ್ ಅವರಿಗೆ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಮಿತಿಯ ನಿರ್ದೇಶಕ ಮೋಹನ ಇಮರಾಪೂರ, ಸಲಹಾ ಸಮಿತಿಯ ಸದಸ್ಯರಾದ ಲೋಕೇಶ ಮಲ್ಲಿಗವಾಡ, ಮುತ್ತು ಜಡಿ, ಉಮೇಶ ಅಂಗಡಿ, ಸಂತೋಷ ಕಠಾರೆ ಮುಂತಾದವರು ಉಪಸ್ಥಿತರಿದ್ದರು.

# ಉದ್ಯೋಗಾಧಾರಿತ ಕೌಶಲ್ಯ ಅತ್ಯಗತ್ಯ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ವಿದ್ಯಾರ್ಥಿಗಳು ವಿದ್ಯಾಭ್ಯಾಸ ದೊಂದಿಗೆ ಉದ್ಯೋಗಾಧಾರಿತ ಕೌಶಲ್ಯಗಳನ್ನು ರೂಢಿಸಿಕೊಂಡು ಯಶಸ್ವಿ ಪ್ರಜೆಗಳಾಗಿ ಜೀವನ ನಡೆಸಬೇಕು ಎಂದು ಪ.ಪಂ ಸದಸ್ಯ ನಾಗರಾಜ ದೇಶಪಾಂಡೆ ಹೇಳಿದರು.

ಅವರು ಪಟ್ಟಣದ ಆರ್. ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನ 2024/25ನೇ ಸಾಲಿನ ಶೈಕ್ಷಣಿಕ ಸಾಲಿನ ವಿವಿಧ ಚಟುವಟಿಕೆಗಳನ್ನು ಉದ್ಘಾಟಿಸಿ ಮಾತನಾಡಿದರು.

ಇಂದು ಆಧುನಿಕ ತಂತ್ರಜ್ಞಾನ ಯುಗದಲ್ಲಿ ಮಕ್ಕಳು ಪಠ್ಯದ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಗಳಲ್ಲಿ



ಭಾಗವಹಿಸಬೇಕು ಹಾಗೂ ವಿವಿಧ ಕೌಶಲ್ಯಗಳನ್ನು ಕರಗತ ಗೊಳಿಸಿಕೊಂಡಲ್ಲಿ ಜೀವನದ ಹಾದಿ ಸುಗಮವಾಗುತ್ತದೆ ಎಂದರು.

ಲಕ್ಷ್ಮೇಶ್ವರ ಸರಕಾರಿ ಪದವಿಪೂರ್ವ ಮಾಹಾ ವಿದ್ಯಾಲಯದ ಉಪನ್ಯಾಸಕ ಬಸವಣ್ಣೆಪ್ಪ ಮುರಳಿಹಳ್ಳಿ ಮಾತನಾಡಿ, ಸಾಧನೆಗೆ ಅಂಗವೈಕಲ್ಯ, ಬಡತನ ಯಾವುದೂ ಅಡ್ಡಿ ಬರುವುದಿಲ್ಲ. ಸಾಧಿಸುವ ಛಲ, ಗುರಿ, ಯಶಸ್ಸಿನ ಮನೋಭಾವ, ಯೋಚನಾ ಶಕ್ತಿ, ಗಟ್ಟಿ ನಿರ್ಧಾರಗಳನ್ನು ವಿದ್ಯಾರ್ಥಿ ಹಂತದಲ್ಲೇ ರೂಡಿಸಿಕೊಂಡಲ್ಲಿ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ಪ್ರಾಂಶುಪಾಲ ಡಾ. ಆರ್.ಎಂ. ಕಲ್ಲನಗೌಡರ ಮಾತನಾಡಿ, ಮಕ್ಕಳಲ್ಲಿ ಅಪಾರ ಜ್ಞಾನದ ಬಂಡಾರ ಅಡಗಿದೆ. ಅದನ್ನು ಸದ್ವಿನಿಯೋಗ ಮಾಡಿಕೊಳ್ಳಲು ಈ ಪದವಿ ಹಂತದಲ್ಲಿ ಸಾಧ್ಯವಾಗುತ್ತದೆ. ಇದರಿಂದ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದರು.

ಪ.ಪಂ ಸದಸ್ಯ ಎಸ್.ಸಿ. ಬಡ್ನಿ, ಪ್ರಸನ್ನ ಎಸ್, ಅನುಪಮ, ಜಾನಕಿ ಮರಾಠೆ, ತಾರಾದೇವಿ, ವಿನಾಯಕ ಶಿರಬಡಿಗಿ, ಗೀತಾಂಜಲಿ, ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿಗಳು ಮತ್ತು ಅತಿಥಿ ಉಪನ್ಯಾಸಕರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka